ಸಂಪುಟ : 10 ಸಂಚಿಕೆ: 174 ಪುಟ : 4+2 ಬೆಲೆ: 3.00 ಶನಿವಾರ ಆಗಸ್ಟ್ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 174 Pages : 4+2 Price : 3.00 Saturday August 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

# ಸ್ವಾತಂತ್ರ್ಯ ಹೋರಾಟದಲ್ಲಿ ಜಿಲ್ಲೆಯ ಮಹನೀಯರ ಪಾತ್ರ ಅಪಾರ

■ವಿಜಯಸಾಕ್ಷಿ ಸುದ್ದಿ, ಗದಗ

ಶತಮಾನಗಳ ದಾಸ್ಯತ್ವವನ್ನು ಕಳಚಿ ಸ್ವತಂತ್ರವಾದ ಭಾರತ, ತನ್ನ 78 ವರ್ಷಗಳನ್ನು ಪೂರ್ಣಗೊಳಿಸಿ ಇಂದು 79ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ಗದಗ ಜಿಲ್ಲೆಯ ಮಹನೀಯರ ಪಾತ್ರ ಅಪಾರವಾಗಿದೆ ಎಂದು ಕಾನೂನು, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತದಿಂದ ಜರುಗಿದ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯಲ್ಲಿ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಸಚಿವರು ಮಾತನಾಡಿದರು.

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ತೋರಿದ ವಿನೂತನವಾದ ಸತ್ಯ, ಅಹಿಂಸೆ ಎಂಬ ಅಸ್ತ್ರಗಳನ್ನು ಹಿಡಿದು ಸತ್ಯಾಗ್ರಹ ಮಾರ್ಗದಿಂದ ಬ್ರಿಟೀಷ್ ಆಡಳಿತದ ವಿರುದ್ಧ ನಮ್ಮ ಹಿರಿಯರು ಹೋರಾಡಿದರು. ಅಸಂಖ್ಯಾತ ಭಾರತೀಯರು ಮಾಡಿದ ತ್ಯಾಗ-ಬಲಿದಾನದಿಂದಾಗಿ

> 2023ರಲ್ಲಿ ಜನತೆಯ ಆಶೀರ್ವಾದದಿಂದ ನಮ್ಮ ಪಕ್ಷ ಅಧಿಕಾರದ ಚುಕ್ಕಾಣಿ ಹಿಡಿದ ನಂತರ, ದಕ್ಷ, ಜನಪರ ಆಡಳಿತ ನೀಡುವಲ್ಲಿ ಯಶಸ್ವಿಯಾಗಿದೆ. ಬಡವರ, ಅವಕಾಶ ವಂಚಿತರ, ಶೋಷಣೆಗೆ ಒಳಗಾದವರ ಪರ ಗಟ್ಟಿಯಾಗಿ ನಿಂತು ಸಾಮಾಜಿಕ, ಆರ್ಥಿಕ, ನ್ಯಾಯ ನೀಡುವ, ನಾಡಿನ ಜನತೆಯ ದೈನಂದಿನ ಬವಣೆಗಳನ್ನು ನೀಗಿಸಲು 5 ಗ್ಯಾರಂಟಿಗಳನ್ನು ಜನತೆಗೆ ಕೊಡಮಾಡಿದ ಕೀರ್ತಿ ಸಿ.ಎಂ ಸಿದ್ಧರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಸಲ್ಲುತ್ತದೆ.
>
> – ಡಾ. ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.



ದೇಶವನ್ನು ಗುಲಾಮಗಿರಿಯ ಸಂಕೋಲೆಯಿಂದ ಮುಕ್ತಗೊಳಿಸಿದರು. ನಮ್ಮ ಸ್ವಾತಂತ್ರ್ಯ ಸೇನಾನಿಗಳ ತ್ಯಾಗ, ಬಲಿದಾನ, ಶ್ರಮ, ಸಮರ್ಪಣಭಾವ, ದೇಶಪ್ರೇಮದ ಫಲವಾಗಿ ಇಂದು ಸ್ವಾಂತಂತ್ರ್ಯ ಸುಖ ಅನುಭವಿಸುತ್ತಿದ್ದೇವೆ. ಸತ್ಯಾಗ್ರಹವು ಸ್ವಾತಂತ್ರ್ಯ ಸಂಗ್ರಾಮ ಮತ್ತು ತದನಂತರ ಸ್ವಾತಂತ್ರ್ಯೋತ್ತರ ಭಾರತದಲ್ಲಿ ಪ್ರಬಲ ಅಸ್ತ್ರವಾಗಿ ಪರಿಣಮಿಸಿ ಅನೇಕ ಆಂದೋಲನ ಮತ್ತು ಚಳವಳಿಗಳಿಗೆ ಯಶ ತಂದುಕೊಡುವಲ್ಲಿ ಪರಿಣಾಮಕಾರಿಯಾದ ಪಾತ್ರ ನಿಭಾಯಿಸುತ್ತಿದೆ ಎಂದು ತಿಳಿಸಿದರು.

ಗದಗ ಪರಿಸರದಲ್ಲಿ ನಡೆದ ಸ್ವಾತಂತ್ರ್ಯ ಹೋರಾಟ ಚಳುವಳಿಯ ಇತಿಹಾಸ ರೋಚಕವಾಗಿದೆ. ಗದಗ ಜಿಲ್ಲೆಯಲ್ಲಿ ಸ್ವಾತಂತ್ರ್ಯ ಹೋರಾಟ 1857ರಿಂದಲೇ ಆರಂಭಗೊಳ್ಳುತ್ತದೆ. ನರಗುಂದದ ಬಾಬಾಸಾಹೇಬ, ಮುಂಡರಗಿಯ ಭೀಮರಾವ್, ಡಂಬಳದ ಕೆಂಚನಗೌಡ, ಅನಂತರಾವ್ ಜಾಲಿಹಾಳ, ಡಾ. ವಾಸುದೇವರಾವ್ ಉಮಚಗಿ, ಬೆಟಗೇರಿಯ ತ್ರಿಮಲ್ಲೇ, ಮಳೇಕರ, ಜಯರಾಮಾಚಾರ್ಯ ಮಳಗಿ, ಡಂಬಳದ ಶ್ರೀನಿವಾಸರಾವ್ ಕಳ್ಳಿ, ತಿಪ್ಪಣ್ಣ ಶಾಸ್ತ್ರಿ, ಅಂದಾನಪ್ಪ ದೊಡ್ಡಮೇಟಿ, ಕೌತಾಳ ವೀರಪ್ಪ, ಕೆ.ಎಚ್. ಪಾಟೀಲರು ಸೇರಿ ಅಸಂಖ್ಯ ಸ್ವಾತಂತ್ರ್ಯ ಸೇನಾನಿಗಳ ಹೋರಾಟ ಅವಿಸ್ಮರಣೀಯ. ಡಾ. ಬಿ.ಜಿ. ಹುಲಗಿ, ಶಂಕ್ರಪ್ಪ ಗುಡ್ಡದ, ಇಸ್ಮಾಯಿಲ ಸಾಹೇಬ, ಕಲ್ಲೂರ ರಾಮಚಾರಿ, ವೆಂಕಟೇಶ ಮಾಗಡಿ, ಕೋಗನೂರ ನಿಂಗಪ್ಪ ಮೊದಲಾದವರು ಬ್ರಿಟೀಷರನ್ನು ಎದುರಿಸಿ ಕಠಿಣ ಶಿಕ್ಷೆ ಅನುಭವಿಸಿದರು. ಈ ಎಲ್ಲ ಮಹಾನ್ ನಾಯಕರಿಗೆ ಸಹಸ್ರ ನಮನಗಳನ್ನು ಸಲ್ಲಿಸೋಣ ಎಂದು ತಿಳಿಸಿದರು. ಸಿವಿಲ್ ಪ್ರಕರಣಗಳಲ್ಲಿ ರಾಜಿಸಂಧಾನ ಕಡ್ಡಾಯಗೊಳಿಸಿ, ಶೀಘ್ರ ನ್ಯಾಯದಾನಕ್ಕೆ ದಿಟ್ಟ ಹೆಜ್ಜೆಯನ್ನಿಟ್ಟು, ಕರ್ನಾಟಕದಲ್ಲಿ ನ್ಯಾಯಕ್ಕಾಗಿ ಕಕ್ಷಿದಾರರು ದಶಕಗಟ್ಟಲೆ ಕಾಯುವುದಕ್ಕೆ ಮುಕ್ತಿ ನೀಡಲಾಗಿದೆ. ಈ ತಿದ್ದುಪಡಿಯು ತಕ್ಷಣದಿಂದ ಕರ್ನಾಟಕದಲ್ಲಿ ಜಾರಿಗೆ ಬಂದಿದೆ. ಕರ್ನಾಟಕ ರಾಜ್ಯವನ್ನು ಆರ್ಥಿಕ ಅಭಿವೃದ್ಧಿಯೆಡೆಗೆ ಕೊಂಡೊಯ್ದು ಹಲವಾರು ಕೈಗಾರಿಕೆಗಳ ಸ್ಥಾಪನೆಗೆ ನಾಂದಿ ಹಾಡಲಾಯಿತು. ಅಭಿವೃದ್ಧಿಯ ಫಲಿತಾಂಶಗಳು ಎಲ್ಲರಿಗೂ ಸಮಾನವಾಗಿ ತಲುಪುವಂತೆ ಪ್ರಾದೇಶಿಕ ಅಸಮತೋಲನೆಯನ್ನು ನಿವಾರಣೆ ಮಾಡಲು ಮಹತ್ವದ ಹೆಜ್ಜೆಯನ್ನು ಇಡಲಾಯಿತು. ರಸ್ತೆಗಳು, ಸೇತುವೆಗಳು, ಪ್ರಮುಖ ನೀರಾವರಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿ ವೇಗವಾಗಿ ಸಾಗಿದೆ ಎಂದರು.

ಸಮಾರಂಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕೆಂಚಪ್ಪನವರ, ಅರಣ್ಯ ವಸತಿ ವಿಹಾರ ಧಾಮಗಳ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಸಂಕಿಮಠ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಸಾರ್ವಜನಿಕರು, ಅಪಾರ ಸಂಖ್ಯೆಯಲ್ಲಿ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> ಸ್ವಾತಂತ್ರ್ಯದ ನಂತರ, ಭಾರತಕ್ಕೆ ಹಲವಾರು ಸೌಕರ್ಯಗಳ ಕೊರತೆಗಳು ಕಾಡಿದ್ದವು. ವಿಶೇಷವಾಗಿ ಕೃಷಿ, ಕೈಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ, ಮೂಲ ಸೌಕರ್ಯ, ಆರೋಗ್ಯ ಮತ್ತು ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿನ ಪ್ರಗತಿಯನ್ನು ಸಾಧಿಸುವ ಸವಾಲನ್ನು ಎದುರಿಸಿ, ಭಾರತವನ್ನು ಕಟ್ಟುತ್ತಾ ಸಾಗಿ ಜಗತ್ತಿನಲ್ಲಿ ಬಹುದೊಡ್ಡ ಆರ್ಥಿಕ ಶಕ್ತಿಯಾಗಿ ಬೆಳೆದು ನಿಂತಿದೆ. ಬಲಿಷ್ಠ ಮತ್ತು ಶ್ರೀಮಂತ ರಾಷ್ಟ್ರಗಳ ಪೈಪೋಟಿಯನ್ನು ಎದುರಿಸಿ ಪ್ರಪಂಚವೇ ಭಾರತವನ್ನು ಗುರುತಿಸುವಂತೆ ಸಾಧನೆ ಮಾಡಲಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ನುಡಿದರು



## ಶಿವರಾಮ್ ಕಬಾಡಿ ನಿಧನ; ನೇತ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಗಂಗಿಮಡಿಯ ಅಮರೇಶ್ವರ ನಗರದ ನಿವಾಸಿ ಶಿವರಾಮ್ ವಿಶ್ವನಾಥಸಾ ಕಬಾಡಿ (71) ಶುಕ್ರವಾರ ನಿಧನರಾದರು. ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದ ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪದಾಧಿಕಾರಿಗಳು ಕುಟುಂಬದ ಸಮ್ಮತಿಯೊಂದಿಗೆ ಮೃತರ ನೇತ್ರಗಳನ್ನು ದಾನ ನೀಡಲು ಒಪ್ಪಿಗೆ ಪಡೆದುಕೊಂಡರು. ಹುಬ್ಬಳ್ಳಿ ಜೋಷಿ ನೇತ್ರಾಲಯದ ತಜ್ಞರ ತಂಡ ನೇತ್ರದಾನ ಪ್ರಕ್ರಿಯೆ ಕೈಗೊಂಡರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೇಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ರಮೇಶ ಶಿಗ್ಲಿ, ನಂದೂ ಬೇವಿನಕಟ್ಟಿ, ಹೇಮಚಂದ್ರ ಕಬಾಡಿ, ಶ್ರೀನಿವಾಸ ಬಾಕಳೆ ಸದಸ್ಯರು, ಕುಟುಂಬಸ್ಥರು ಉಪಸ್ಥಿತರಿದ್ದರು.

### ದೇಶದಲ್ಲೇ ಪ್ರಪ್ರಥಮ ಬಾರಿಗೆ 'ಪ್ರಭುವಿನೆಡೆಗೆ ಪ್ರಜಾಪ್ರಭುತ್ವ'; ಸಚಿವ ಎಚ್.ಕೆ. ಪಾಟೀಲ

# ಪ್ರಜೆಗಳು ನೆಮ್ಮದಿಯಿಂದ ಬದುಕಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಆಡಳಿತದಲ್ಲಿ ಪ್ರಜೆಗಳಿಗೆ ತೀವ್ರವಾಗಿ ಸ್ಪಂದಿಸಿ, ಪಾರದರ್ಶಕತೆ ಮೆರೆಯಲು ಗದಗ ನಗರದಲ್ಲಿ ದೊಡ್ಡ ಹೆಜ್ಜೆ ಇಟ್ಟಿದ್ದೇವೆ. ಸಮಸ್ಯೆಗೆ ತ್ವರಿತಗತಿಯಲ್ಲಿ ಪರಿಹಾರ ಸಿಗಬೇಕು ಎನ್ನುವ ಉದ್ದೇಶದಿಂದ ದೇಶದಲ್ಲೇ ಪ್ರಥಮ ಬಾರಿಗೆ 'ಪ್ರಭುವಿನೆಡೆಗೆ

> ನಗರದಲ್ಲಿನ ಥರ್ಡ್ ಐ ವ್ಯವಸ್ಥೆಯಿಂದ ಮನೆಗಳ್ಳತನ, ಸುಲಿಗೆ, ಅಪಘಾತಗಳು ಶೇ. 25 ಇಳಿಮುಖವಾಗಿವೆ. ಕೊಲೆ ಪ್ರಕರಣಗಳನ್ನು ತಕ್ಷಣ ಪತ್ತೆ ಹಚ್ಚಲಾಗುತ್ತಿದ್ದು, ಕ್ರೈಂ ಪ್ರಕರಣಗಳು ಕಡಿಮೆ ಆಗಿವೆ. ಸಾರಿಗೆ ನಿಯಮ ಉಲ್ಲಂಘನೆ ಪ್ರಕರಣಗಳು ತೀರಾ ಕಡಿಮೆ ಆಗಿವೆ. ಸಮಾಜದ ಹಿತಕ್ಕಾಗಿ ಹೊಸ ಹೊಸ ವ್ಯವಸ್ಥೆಯನ್ನು ಜಿಲ್ಲೆಯಲ್ಲಿ ಜಾರಿಗೆ ತಂದು ಯಶಸ್ವಿಯಾಗುತ್ತಿದ್ದೇವೆ. ಒಟ್ಟಾರೆಯಾಗಿ ಪ್ರಜೆಗಳು ನೆಮ್ಮದಿಯಿಂದ ಬದುಕಬೇಕು ಎನ್ನುವುದೇ ಕರ್ನಾಟಕ ಸರ್ಕಾರದ ಮೂಲ ಉದ್ದೇಶವಾಗಿದೆ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು



ಪ್ರಜಾಪ್ರಭುತ್ವ' ಕಾರ್ಯಕ್ರಮ ಮಾಡಲಾಗುತ್ತಿದೆ. ದೇಶದ ಪ್ರಜೆಗೆ ಪ್ರಭುವಿನ ಪಟ್ಟ ಇದೆ. ಪ್ರಜೆಗಳನ್ನು ಅಧಿಕಾರಸ್ಥರನ್ನಾಗಿ ಮಾಡಲಾಗುತ್ತಿದ್ದು, ತ್ವರಿತಗತಿಯಲ್ಲಿ ಸಮಸ್ಯೆಗೆ ಪರಿಹಾರ ನೀಡುವ ಕಾರ್ಯಕ್ರಮ ಇದಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು. ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಅವರು ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ಈ ಕಲ್ಪನೆ ದೇಶದಲ್ಲಿಯೇ ಮೊದಲು. ಹಿಂದಿನ ಅರಸರ ಕಾಲದಲ್ಲಿ ನಾಗರಿಕರಿಗೆ ತೊಂದರೆ ಆದಾಗ ನ್ಯಾಯದ ಘಂಟೆಯನ್ನು ಬಾರಿಸಬೇಕಾಗಿತ್ತು. ಆದರೆ, ಈಗ ಕಾಲ ಬದಲಾಗಿದ್ದು, ಬಟನ್ ಒತ್ತುವ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಬಹುದು. ಬಟನ್ ಒತ್ತಿದಾಕ್ಷಣ ಕಮಾಂಡ್ ಸೆಂಟರ್‌ನವರು ಮಾಹಿತಿ ಪಡೆಯುತ್ತಾರೆ. ಜನರ ದೂರು ಆಲಿಸಿ ತಕ್ಷಣ ಸಂಬಂಧಿಸಿದವರಿಗೆ ಕಳುಹಿಸಿಕೊಡುತ್ತಾರೆ. ಇದರಿಂದ ಕೆಲವೇ ಗಂಟೆಗಳಲ್ಲಿ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ಈ ಕಾರ್ಯಕ್ರಮವನ್ನು ನಗರದ 10 ಕಡೆಗಳಲ್ಲಿ ಜಾರಿಗೋಳಿಸಲಾಗುತ್ತಿದ್ದು, ಆಗಸ್ಟ್ 15ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಹಾಗೂ ಜವಳಗಲ್ಲಿಯಲ್ಲಿ ಉದ್ಘಾಟನೆ ಮಾಡಿದ್ದೇವೆ ಎಂದರು. ಅಂಜಿಕೆ, ಭಯ ಇಲ್ಲದೆ ದೂರು ನೀಡುವ ವಿನೂತನ ವ್ಯವಸ್ಥೆ ಇದಾಗಿದ್ದು, ಇದರಿಂದ ಆಡಳಿತ ವ್ಯವಸ್ಥೆ ಚುರುಕುಗೊಳ್ಳುತ್ತದೆ. ದೂರು ನೀಡಿದಾಗ ವೆಬ್‌ಸೈಟ್‌ನಲ್ಲಿ ಫೈಲ್ ಕ್ರಿಯೇಟ್ ಆಗುತ್ತದೆ. ಇದರಿಂದ ದೂರು ನೀಡಿದ ಬಗ್ಗೆ ಸಂಪೂರ್ಣ ಮಾಹಿತಿ ಲಭ್ಯವಾಗುತ್ತದೆ.

> ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ, ಹಿರಿಯ ನಾಗರಿಕರ ರಕ್ಷಣೆ, ಅಕ್ರಮ ಮದ್ಯ ಮಾರಾಟ, ರಸ್ತೆ ಸುರಕ್ಷತಾ ಕ್ರಮ, ಸಮಾಜ ದ್ರೋಹಿ ಚಟುವಟಿಕೆ, ಅನುಮಾನಾಸ್ಪದ ವಸ್ತುಗಳು, ಜಮೀನು ಹಕ್ಕುಗಳ ಪ್ರಕರಣ, ಪಿಂಚಣಿ ಸಂಬಂಧಿಸಿದ ಪ್ರಕರಣ, ಪಂಚಾಯಿತಿ ಸೇವೆವೆ ಸೇರಿದಂತೆ ಇನ್ನಿತರ ವಿಷಯಗಳಿಗೆ ಸಂಬಂಧಿಸಿ ಸಾರ್ವಜನಿಕರು ಮುಕ್ತವಾಗಿ ದೂರು ಸಲ್ಲಿಸಬಹುದು.

▶▶ 4ನೇ ಪುಟಕ್ಕೆ

## ಸಮಾಜದಲ್ಲಿ ಗೌರವದ ಸ್ಥಾನ ಪಡೆಯಬೇಕು



■ವಿಜಯಸಾಕ್ಷಿ ಸುದ್ದಿ, ರೋಣ

ಸಣ್ಣ ರೈತರು ಸೇರಿದಂತೆ ಎಲ್ಲ ರೈತರು ಇನ್ನುಮುಂದೆ ಎನ್.ಎ ಮಾಡಿಸುವಂತಿಲ್ಲ ಎಂದು ಶಾಸಕ ಹಾಗೂ ರಾಜ್ಯ ಖನಿಜ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ರೋಣ ಪಟ್ಟಣದ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 79ನೇ ಸ್ವಾತಂತ್ರ್ಯ ದಿನಚಾರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿದ್ಯಾವಂತ ಯುವಕರು ತಮ್ಮ ಸ್ವಂತ ಜಮೀನಿಗಳಲ್ಲಿ ಸ್ವ-ಉದ್ಯೋಗ ಮಾಡಿಕೊಳ್ಳಲು ಸರಕಾರಕ್ಕೆ ಅಥವಾ ಗ್ರಾ.ಪಂಗಳಿಗೆ ತೆರಿಗೆ ಕಟ್ಟುವ ಅವಶ್ಯಕತೆಯಿಲ್ಲ. ಹೀಗಾಗಿ ವಿದ್ಯಾವಂತ ಯುವಕರು ಸ್ವ-ಉದ್ಯೋಗದಲ್ಲಿ ತೊಡಗಿಕೊಳ್ಳುವ ಮೂಲಕ ತಮ್ಮ ಜೀವನವನ್ನು ರೂಪಿಸಿಕೊಳ್ಳಬೇಕು. ಎಲ್ಲಕ್ಕಿಂತ ಮುಖ್ಯವಾಗಿ ವಿದ್ಯಾವಂತ ಯುವಕರು ಸರಕಾರಿ ನೌಕರಿಗಳನ್ನು ಬಯಸುವ ಮೊದಲು ಸರಕಾರ ಜಾರಿಗೆ ತಂದಿರುವ ಯೋಜನೆಗಳ ಸದ್ಬಳಕೆ ಮಾಡಿಕೊಂಡು ಸಮಾಜದಲ್ಲಿ ಗೌರವದ ಸ್ಥಾನ ಪಡೆಯಬೇಕು ಎಂದರು.

ತಾಲೂಕಿನಲ್ಲಿ ನಿರಂತರ ಮಳೆಯಿಂದ ಮುಂಗಾರು ಹಂಗಾಮಿನ ಎಲ್ಲ ಬೆಳೆಗಳು ಹಾನಿಗೊಳಗಾಗಿವೆ. ಈಗಾಗಲೇ ರಾಜ್ಯ ಸರಕಾರದ ಗಮನವನ್ನು ಸೆಳೆಯುವ ಮೂಲಕ ರೈತರಿಗೆ ಪರಿಹಾರ ವಿತರಣೆ ಮಾಡಲು ಕೋರಲಾಗಿದೆ. ಪರಿಹಾರದ ಹಣ ಶೀಘ್ರವೇ ರೈತರ ಖಾತೆಗೆ ಜಮೆಯಾಗಲಿದೆ. ಹಿಂಗಾರು ಹಂಗಾಮಿನ ಕಡಲೆ ಬೆಳೆ ವಿಮಾ ಹಣ ಬಿಡುಗಡೆಯಾಗಿದ್ದು, ರೈತರ ಖಾತೆಗೆ ಜಮಾ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು. ತಹಸೀಲ್ದಾರ ನಾಗರಾಜ ಕೆ ಧ್ವಜಾರೋಹಣ ನೆರವೇರಿಸಿದರು. ಪುರಸಭೆ ಅಧ್ಯಕ್ಷೆ ಬಸ್ಸಮ್ಮ ಕೊಪ್ಪದ, ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ತಾ.ಪಂ ಇಓ ಚಂದ್ರಶೇಖರ ಕಂದಕೂರ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

### ಗದಗ ವಾಣಿಜ್ಯೋದ್ಯಮ ಸಂಸ್ಥೆಯ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಎಚ್.ಕೆ. ಪಾಟೀಲ ವಿಷಾದ

# ಸಣ್ಣ ಕೈಗಾರಿಕೆಗಳ ಬಗ್ಗೆ ದೇಶದಲ್ಲೇ ನಿರ್ಲಕ್ಷ್ಯವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಕೈಗಾರಿಕೆಗಳಿಗೆ ದೇಶ ಮತ್ತು ರಾಜ್ಯದಲ್ಲಿ ಪ್ರತ್ಯೇಕ ಕೈಗಾರಿಕಾ ನೀತಿ ಅಗತ್ಯವಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಗದಗ ವಾಣಿಜ್ಯೋದ್ಯಮ ಸಂಸ್ಥೆಯ 50 ವರ್ಷದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ಸಣ್ಣ ಕೈಗಾರಿಕೆ ಉದ್ಯಮಿಗಳು ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸರ್ಕಾರದ ಕಣ್ಣು ತೆರೆಸಬೇಕು. ಬೆಂಗಳೂರಿನಲ್ಲಿ ಕೈಗಾರಿ-ಕೆ, ಉದ್ಯಮಿಗಳಿಗೆ ಹೆಚ್ಚಿನ ಅನುಕೂಲಗಳಿವೆ. ಆದರೆ ಗದುಗಿನಂತಹ ಜಿಲ್ಲೆಗಳಲ್ಲಿ ಇರುವ ಸಣ್ಣ ಕೈಗಾರಿಕೆ ಹೆಚ್ಚಿನ ಅನುಕೂಲ (ಈಸ್ ಆಫ್ ಬ್ಯುಸಿನೆಸ್) ಇಲ್ಲ. ಸಣ್ಣ ಕೈಗಾರಿಕೆಗಳು ಹೋರಾಟ ಮೂಲಕವೇ ಅಸ್ತಿತ್ವ ಕಂಡುಕೊಳ್ಳಬೇಕಿದೆ. ಸಣ್ಣ ಕೈಗಾರಿಕೆ ಬಗ್ಗೆ ದೇಶದಲ್ಲೇ ನಿರ್ಲಕ್ಷ್ಯ ಮಾಡಲಾಗಿದೆ. ಬೃಹತ್ ಕೈಗಾರಿಕೆಗಳಿಗೆ ಸಿಗುವಂತೆ ಸುಲಭ ಅನುಮತಿಗಳು ಸಣ್ಣ ಕೈಗಾರಿಕೆಗಳು ಸಿಗುತ್ತಿಲ್ಲ ಎಂಬ ನೋವು ನನಗೂ ಇದೆ. ವಾಣಿಜ್ಯೋದ್ಯಮ ಸಂಸ್ಥೆಗೂ ಇದೆ ಎಂದರು.



ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ಜಿ.ಎಸ್. ಪಾಟೀಲ, ಉದ್ದಿಮೆದಾರರಿಗೆ ಉಪಯೋಗ ಆಗುವ ಎಲ್ಲ ಕಾರ್ಯಗಳನ್ನು ಗದಗ ವಾಣಿಜ್ಯೋದ್ಯಮ ಸಂಸ್ಥೆ ಮಾಡುತ್ತ ಬಂದಿದೆ. ಆಧುನಿಕ ವ್ಯವಸ್ಥೆಯಲ್ಲಿ ಬಹಳಷ್ಟು ಬದಲಾಣೆಗಳನ್ನು ಕಾಣುತ್ತಿದ್ದೇವೆ. ಇಂತಹ ವ್ಯವಸ್ಥೆಯಲ್ಲಿ ಸಂಸ್ಥೆ 50 ವರ್ಷ ನಿರಂತರ ಸೇವೆ ನೀಡಿದ್ದು ಅಭಿನಂದನಾರ್ಹ ಎಂದು ಹೇಳಿದರು.

> ನಗರಕ್ಕೆ ಎಚ್.ಕೆ. ಪಾಟೀಲರು ವ್ಯಾಪಾರ, ಅಭಿವೃದ್ಧಿ, ಸಾಂಸ್ಕೃತಿಕ ಬೆಳವಣಿಗೆಗೆ ಉತ್ತಮ ಪ್ರಾಧಿಕಾರ ತಂದಿದ್ದಾರೆ. ಅದಕ್ಕಾಗಿ ಪಿಪಿಪಿ ಮಾಡಲ್‌ನಲ್ಲಿ ನೀಲನಕ್ಷೆ ಸಿದ್ಧಪಡಿಸಿದ್ದಾರೆ. ಸರ್ಕಾರದಿಂದ ವಕಾರ ಸಾಲು ಅಭಿವೃದ್ಧಿ ಪ್ರಾಧಿಕಾರಕ್ಕೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು. ಈ ಪ್ರಾಧಿಕಾರದಿಂದ ಜಿಲ್ಲೆಯಲ್ಲಿ ಉದ್ಯೋಗ ಸೃಷ್ಟಿ ಆಗಲಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಕೊಪ್ಪಳದ ಗವಿಸಿದ್ದೇಶ್ವರ ಶ್ರೀಗಳು ಮಾತನಾಡಿ, ಮಕ್ಕಳಿಗೆ ನೀಟ್ ಪರೀಕ್ಷೆ ಬರೆಯುವುದನ್ನು ಕಲಿಸುತ್ತೇವೆ. ಆದರೆ ನೀಟಾಗಿ ಬದುಕುವುದನ್ನು ಕಲಿಸಲಿಲ್ಲ. ಎಲ್ಲವನ್ನೂ ಪಡೆಯುವುದಕ್ಕಾಗಿ ಆರೋಗ್ಯ ಮತ್ತು ಆನಂದದಿಂದ ಇರುವುದನ್ನು ಕಲಿಸಬೇಕು. ಮನೆಯಲ್ಲಿ ನೋಟಿನ ಕಟ್ಟು ಇದ್ದವರು ಶ್ರೀಮಂತರಲ್ಲ. ಮೊಣಕಾಲು ಗಟ್ಟಿ ಇದ್ದವನು ಶ್ರೀಮಂತ ಎಂದು ಹೇಳಿದರು.

▶▶ 3ನೇ ಪುಟಕ್ಕೆ



## ಇಂದಿರಾ ಕ್ಯಾಂಟೀನ್ ಲೋಕಾರ್ಪಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಾನಯೋಗಿ ಪಂ. ಪುಟ್ಟರಾಜ ಗವಾಯಿಗಳ ಬಸ್ ನಿಲ್ದಾಣದಲ್ಲಿ ಆಗಸ್ಟ್ 15ರಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ನೂತನವಾಗಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ್ ಕೆ.ಆರ್ ಸೇರಿದಂತೆ ಗದಗ-ಬೆಟಗೇರಿ ನಗರ ಸಭೆಯ ಸದಸ್ಯರು ಉಪಸ್ಥಿತರಿದ್ದರು.




ಲಕ್ಷ್ಮೇಶ್ವರದ ಎಂಜಿಎಂ ಯೂನಿವರ್ಸಲ್ ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನೋತ್ಸವವನ್ನು ವಿಜ್ರಂಭಣೆಯಿಂದ ಆಚರಿಸಲಾಯಿತು. ಮಕ್ಕಳಿಂದ ಸ್ವಾತಂತ್ರ್ಯ ಹೋರಾಟಗಾರರ ವೇಷಭೂಷಣ, ದೇಶಭಕ್ತಿ ಗೀತೆ ಮತ್ತು ನೃತ್ಯಗಳು ಜರುಗಿದವು. ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಶಾಲೆಯ ಅಧ್ಯಕ್ಷರಾದ ಬಸವೇಶ್ವರ ಮಹಾಂತಶೆಟ್ಟರ, ನಿರ್ದೇಶಕರಾದ ವಿಜಯಕುಮಾರ ಮಹಾಂತ ಶೆಟ್ಟರ, ರಮೇಶ ನವಲೆ, ಪ್ರಾಂಶುಪಾಲ ಹೇಮಂತ್ ಟಗರಿ ಉಪಸ್ಥಿತರಿದ್ದರು.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 'ಸುವರ್ಣ ಮಹೋತ್ಸವ'ದಲ್ಲಿ ಸಾಧಕರಿಗೆ ಪುರಸ್ಕಾರ

# 'ಜೀವಮಾನ ಸಾಧನೆ' ಪ್ರಶಸ್ತಿ ಪುರಸ್ಕೃತರು



ಚಂದ್ರು ಜ.ಬಾಳಿಹಳ್ಳಿಮಠ ಮೂಲತಃ ಕೃಷಿ ಕುಟುಂಬದವರು. ಲಕ್ಷ್ಮೇಶ್ವರ ಹಾಗೂ ಗದಗ ನಗರದಲ್ಲಿ ತಮ್ಮದೇ ಆದ ವಿಶೇಷ ಛಾಪನ್ನು ಮೂಡಿಸಿ, ವ್ಯಾಪಾರದಲ್ಲಿ ನಿಷ್ಠೆಯ ದುಡಿಮೆಯಿಂದ ವ್ಯಕ್ತಿತ್ವವನ್ನು ಶ್ರೀಮಂತಗೊಳಿಸಿಕೊಂಡು ರೈತರ ಹಾಗೂ ವ್ಯಾಪಾರಿಗಳ ಗೌರವಕ್ಕೆ ಪಾತ್ರರಾಗಿದ್ದ ಲಿಂ. ಜಯದೇವಯ್ಯ (ಜಯಣ್ಣ)ನವರ ಮೂರನೇ ಸುಪುತ್ರ ಮಿತಭಾಷಿ ಚಂದ್ರು ಬಾಳಿಹಳ್ಳಿಮಠರು.

ಪ್ರಾಥಮಿಕ ಶಿಕ್ಷಣವನ್ನು ಸರಕಾರಿ ಶಾಲೆಯಲ್ಲಿ ಹಾಗೂ ಮಾಧ್ಯಮಿಕ ಶಿಕ್ಷಣವನ್ನು ವಿದ್ಯಾದಾನ ಸಮಿತಿ ಗಂಡು ಮಕ್ಕಳ ಶಾಲೆಯಲ್ಲಿ ಪೂರೈಸಿ ಆದರ್ಶ ಶಿಕ್ಷಣ ಸಮಿತಿಯ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬಿ.ಕಾಂ ಪದವಿಯನ್ನು ಪಡೆದು, ಕೆ.ಎಲ್.ಇ. ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಎರಡು ವರ್ಷ ಅಭ್ಯಸಿಸಿ ವ್ಯಾಪಾರದಲ್ಲಿ ತೊಡಗಿಸಿಕೊಂಡರು.

ಕುಟುಂಬ ವ್ಯಾಪಾರವಾದ ದಲಾಲಿ ಅಂಗಡಿಯ ಜೊತೆ ಮೆ॥ ಬಾಳಿಹಳ್ಳಿಮಠ & ಕಂ ಎಂಬ ಸ್ಟಾಕಿಸ್ಟ್ & ಡಿಸ್ಟ್ರಿಬ್ಯೂಟರ್ ಹೊಸ ವ್ಯಾಪಾರವನ್ನು 1986ರಲ್ಲಿ ಪ್ರಾರಂಭಿಸಿ ಅದರ ಮೂಲಕ ಪ್ರಮುಖ ಕಂಪನಿಗಳ ವಿತರಕರಾಗಿ ವ್ಯವಹಾರವನ್ನು ಮಾಡತೊಡಗಿದರು. ಹುಬ್ಬಳ್ಳಿ ಸ್ಟಾಕ್ ಟ್ರೇಡಿಂಗ್ ಸದಸ್ಯರಾಗಿ ಷೇರು ಮಾರುಕಟ್ಟೆ ಪ್ರವೇಶಿಸಿ ಷೇರು ವ್ಯವಹಾರವನ್ನು ಮಾಡಿದರು. ಹಿಂದೂಸ್ತಾನ ಪೆಟ್ರೋಲಿಯಂ ಕಂಪನಿಯ ವಿತರಕರಾಗಿಯೂ ವ್ಯವಹಾರವನ್ನು ವಿಸ್ತರಿಸಿದ್ದಾರೆ.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಗೆ 1987ರಲ್ಲಿ ಸದಸ್ಯರಾಗಿ ಸಕ್ರಿಯವಾಗಿ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಾ, 2004-2005ನೇ ಸಾಲಿನ ಸಂಸ್ಥೆಯ ಚಿಕ್ಕ ವಯಸ್ಸಿನ ಅಧ್ಯಕ್ಷರಾಗಿ ಸೇವೆಯನ್ನು ಸಲ್ಲಿಸಿದ್ದಾರೆ. ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಸದಸ್ಯರಾಗಿ 6 ವರ್ಷ ಆಡಳಿತ ಮಂಡಳಿ ನಿರ್ದೇಶಕರಾಗಿ ಸೇವೆಯನ್ನು ಸಲ್ಲಿಸಿದ್ದಾರೆ. ಗದಗ ಒಣಮೆಣಸಿನಕಾಯಿ ದಲಾಲ ಹಾಗೂ ಖರೀದಿ ವರ್ತಕರ ಸಂಘದ ಅಧ್ಯಕ್ಷರಾಗಿ 10 ವರ್ಷದಿಂದ ಕಾರ್ಯನಿರ್ವಹಿಸುತ್ತಿದ್ದಾರೆ.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ಸುವರ್ಣ ಮಹೋತ್ಸವ ಸಂಭ್ರಮಕ್ಕೆ ಆಗಮಿಸುತ್ತಿರುವ ಮಂಜುನಾಥ ಇಂಜಿನಿಯರಿಂಗ್ ವರ್ಕ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಗಂಗಾಧರ ಪಾಟೀಲ ಗುಜರಾತ್ ರಾಜ್ಯಕ್ಕೆ ಹೋಗಿ ದೊಡ್ಡ ಉದ್ಯಮವನ್ನು ಪ್ರಾರಂಭಿಸುವುದರ ಮುಖಾಂತರ ಹೊಸ ಹೊಸ ರೋಸ್ಟರ್ ಯಂತ್ರಗಳನ್ನು ತಯಾರಿಸುತ್ತಾರೆ. ಅವು ರಾಷ್ಟ್ರ ವ್ಯಾಪ್ತಿ ಮೆಚ್ಚುಗೆಯನ್ನು ಪಡೆದುಕೊಂಡಿವೆ.

ಕಾರ್ಖಾನೆಯ ಗಾತ್ರ ಮತ್ತು ಹುರಿಯಲು ಬೇಕಾದ ಆಹಾರ ಪ್ರಮಾಣ ಏನೇ ಇರಲಿ, ಅದಕ್ಕೆ ತಕ್ಕಂತೆ ಮಂಜುನಾಥ ಇಂಜಿನಿಯರಿಂಗ್‌ನವರು ನಮಗೆ ಬೇಕಾದಂತೆ ಸರಿಹೊಂದುವ ಯಂತ್ರವನ್ನು ತಯಾರಿಸಿಕೊಡುತ್ತಾರೆ. ಗಂಗಾಧರ ಪಾಟೀಲರು ಒಂದು ಸಣ್ಣ ಉಪಕ್ರಮ ಮತ್ತು ಕೆಲವೇ ಜನರ ಸಂಪನ್ಮೂಲ ಸಹಾಯದಿಂದ ರೋಸ್ಟ್ ಯಂತ್ರವನ್ನು ಅಭಿವೃದ್ಧಿಪಡಿಸಿದರು. ಇಂದು ಅನೇಕ ಸಹೋದ್ಯೋಗಿಗಳೊಂದಿಗೆ ಎಲ್ಲಾ ರೀತಿಯ ಹುರಿಯುವ ಆಹಾರ ಸಾಮಗ್ರಿಗಳಿಗೆ ರೋಸ್ಟರ್ ಯಂತ್ರಗಳನ್ನು ಉಪಯೋಗಿಸುತ್ತಿದ್ದಾರೆ. ಇದು ಈಗ ಭಾರತದ ಪ್ರತಿಯೊಂದು ದಿಕ್ಕಿನಲ್ಲಿ ಹಾಗೂ ನೇಪಾಳದಂತಹ ನೆರೆಯ ರಾಷ್ಟ್ರಗಳಲ್ಲಿ ಪ್ರಸಿದ್ಧಿಯಾಗಿದೆ.

ಪೂರ್ಣಿಮಾ ಕೋಕೋನಟ್ ಪ್ರೊಡಕ್ಟ್ಸ್ ಪ್ರೈ, ಲಿ, ಶಿರಸಿಯ ವ್ಯವಸ್ಥಾಪಕ ನಿರ್ದೇಶಕ

ಅಶೋಕ ಪಿ.ಹಬೀಬ ಮೂಲತಃ ಗದುಗಿನವರು. ಇವರು ಪದವಿಪೂರ್ವ ಶಿಕ್ಷಣವನ್ನು ಗದಗದ ಜೆ.ಟಿ. ಕಾಲೇಜಿನಲ್ಲಿ ಪೂರ್ಣಗೊಳಿಸಿದರು. ಮೆಕ್ಯಾನಿಕಲ್ ಇಂಜಿನಿಯರಿಂಗ್‌ನಲ್ಲಿ ಚಿನ್ನದ ಪದಕ ವಿಜೇತರಾದ ಅವರು ನಂತರ ಕರ್ನಾಟಕ ವಿಶ್ವವಿದ್ಯಾಲಯದಿಂದ ಮಾರ್ಕೆಟಿಂಗ್ ಮತ್ತು ಉತ್ಪಾದನಾ ನಿರ್ವಹಣೆಯಲ್ಲಿ ಎಂ.ಬಿ.ಎ ಪದವಿ ಪಡೆದರು. 1992ರಲ್ಲಿ ಶಿರಸಿಯಲ್ಲಿ ಮೆ. ಎಸ್. ಪೂರ್ಣಿಮಾ ಕೋಕೋನಟ್ ಪ್ರಾಡಕ್ಸ್ಟ್ ಪ್ರೈವೇಟ್ ಲಿಮಿಟೆಡ್ ಮತ್ತು 2020ರಲ್ಲಿ ಹೊನ್ನಾವರದಲ್ಲಿ ತ್ರಿವೇಣಿ ಕೋಕೋನಟ್ ಪ್ರಾಡಕ್ಟ್ಸ್ ಅನ್ನು ಸ್ಥಾಪಿಸಿದರು.

ಇಂದು ಅವರು ಸುಮಾರು 80 ಜನರಿಗೆ ಉದ್ಯೋಗವನ್ನು ಒದಗಿಸುತ್ತಾರೆ. ಅವರಲ್ಲಿ ಹೆಚ್ಚಿನವರು ಮಹಿಳೆಯರು. 2013ರಲ್ಲಿ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯಿಂದ ವಾಂಜಿಯ ರತ್ನ ಪ್ರಶ್ತಿಯನ್ನು ಪಡೆದಾಗ ಉದ್ಯಮಕ್ಕೆ ಅವರು ಕೊಡುಗೆಗಳನ್ನು ಗುರುತಿಸಲಾಯಿತು. ಇವೆಲ್ಲದರ ಹೊರತಾಗಿ ಅವರು ಒಬ್ಬ ಶ್ರದ್ಧಾವಂತ ಯೋಗಾಭ್ಯಾಸಿ. ಉದ್ಯಮಶೀಲತೆಯಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವುದನ್ನು ಆನಂದಿಸುತ್ತಾರೆ. ಇವರು ಗದಗ ಜಿಲ್ಲೆಯಲ್ಲಿ ಜನಿಸಿ ಬೇರೆ ಜಿಲ್ಲೆ ಅಥವಾ ರಾಜ್ಯದಲ್ಲಿ ದೊಡ್ಡ ಉದ್ದಿಮೆಯನ್ನು ಸ್ಥಾಪಿಸಿ ಉದ್ದಮೆಯನ್ನು ಬೆಳೆಸಿ ನಮ್ಮ ಜಿಲ್ಲೆಗೆ ಹೆಸರು ತಂದಿದ್ದಾರೆ.

ಇವರೆಲ್ಲರೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡ ಅಖಿಲ ಕರ್ನಾಟಕ ವಾಣಿಜ್ಯೋದ್ಯಮಿಗಳ ಸಮ್ಮೇಳನ ಹಾಗೂ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ ಗದಗ ಉತ್ಸವ-2025ರಲ್ಲಿ ವಿಶೇಷ ಸನ್ಮಾನಿತರಾಗಿ ಆಗಮಿಸಲಿದ್ದಾರೆ.

## ಬೆಂಗಳೂರು| ಸಫಾರಿ ವೇಳೆ ಬಾಲಕನ ಮೇಲೆ ಚಿರತೆ ದಾಳಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬನ್ನೇರುಘಟ್ಟದ ಜೈವಿಕ ಉದ್ಯಾನವನದಲ್ಲಿ ಸಫಾರಿ ವೇಳೆ ಚಿರತೆಯೊಂದು ಬಾಲಕನ ಮೇಲೆ ದಾಳಿ ಮಾಡಿದ ಘಟನೆ ಜರುಗಿದೆ.

13 ವರ್ಷದ ಬಾಲಕ ಪೋಷಕರ ಜೊತೆ ಸಫಾರಿಗೆ ತೆರಳಿದ್ದ. ಈ ವೇಳೆ ಚಿರತೆಯನ್ನು ನೋಡಿ ಚಾಲಕ ಬೊಲೆರೋ ನಿಲ್ಲಿಸಿದ್ದಾನೆ. ನಿಂತ ಕೆಲ ಕ್ಷಣದ ಬಳಿಕ ಬೊಲೆರೋ ಮುಂದಕ್ಕೆ ನಿಧಾನವಾಗಿ ಸಾಗಿದೆ. ಈ ವೇಳೆ ಬೊಲೆರೋ ಹಿಂಬಾಲಿಸಿದ ಚಿರತೆ ಕಿಟಕಿಯ ಮೂಲಕ ಕೈ ಹಾಕಿ ಉಗುರಿನಿಂದ ಪರಚಿದೆ. ಇದರಿಂದ ಗಾಯಗೊಂಡ ಗಾಯಾಳುಗೆ ಸ್ಥಳೀಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ. ಚಿಕಿತ್ಸೆ ಬಳಿಕ ಬಾಲಕ ಮನೆಗೆ ತೆರಳಿದ್ದಾನೆ.

ಚಿರತೆ ಬೊಲೆರೋ ಹತ್ತಿ ದಾಳಿ ನಡೆಸುತ್ತಿರುವ ದೃಶ್ಯ ಹಿಂಬದಿಯ ವಾಹನದಲ್ಲಿ ಸಫಾರಿಗೆ ತೆರಳಿದ್ದ ಪ್ರವಾಸಿಗರ ಮೊಬೈಲಿನಲ್ಲಿ ಸೆರೆಯಾಗಿದೆ.

## ತುಂಗಭದ್ರಾ ಜಲಾಶಯದ ಏಳು ಗೇಟ್‌ಗಳು ಡ್ಯಾಮೇಜ್ ಆಗಿದೆ!

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇಲ್ಲಿನ ತುಂಗಭದ್ರಾ ಡ್ಯಾಂನ 7 ಗೇಟ್‌ಗಳಿಗೆ ಡ್ಯಾಮೇಜ್ ಆಗಿದೆ ಎಂದು ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ತುಂಗಭದ್ರಾ ಜಲಾಶಯದ ಗೇಟ್ ನಂಬರ್ 4, 11, 18, 20, 24, 27 ಹಾಗೂ 28ನೇ ಗೇಟ್ ಸೇರಿದಂತೆ 7 ಗೇಟ್‌ಗಳು ಬೆಂಡ್ ಆಗಿವೆ. ಇದರಲ್ಲಿ, 6 ಗೇಟ್ ಗಳನ್ನು ಮೇಲೆ ಎತ್ತಲು ಹಾಗೂ ಇಳಿಸಲು ಆಗುತ್ತಿಲ್ಲ. ಗೇಟ್ ನಂಬರ್ 4 ಅನ್ನು ಕೇವಲ ಎರಡು ಅಡಿ ಮಾತ್ರ ಮೇಲಕ್ಕೆ ಎತ್ತಬಹುದು. ಗೇಟ್ ನಂಬರ್ 4 ಸೇರಿದಂತೆ ಒಟ್ಟು ಏಳು ಗೇಟ್‌ಗಳು ಡ್ಯಾಮೇಜ್ ಆಗಿವೆ ಎಂದು ತಿಳಿಸಿದರು.

### ಬಸವ ಯೋಗ ಮಂದಿರದಲ್ಲಿ ಸಾಪ್ತಾಹಿಕ ವಚನ ಶ್ರಾವಣ-2025

# ಸತ್ಯ ಶುದ್ಧ ಕಾಯಕ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಆಯುರ್ವೇದ ಶಾಸ್ತ್ರದಲ್ಲಿ ತಿಳಿಸಿದಂತೆ ನಮ್ಮ ಮನಸ್ಸು ಪ್ರಸನ್ನವಾಗಿದ್ದರೆ ಮಾತ್ರ ನಾವು ಸ್ವಸ್ಥರಾಗಿರುತ್ತೇವೆ. ಆದರೆ ಇಂದು ನಮ್ಮ ಮನಸ್ಸು ನಾನಾ ರೋಗ-ರುಜಿನಗಳ ಮತ್ತು ತಾಪತ್ರಯಗಳ ಗೂಡಾಗಿದೆ. ಹೀಗಾಗಿ ನಾವು ಸ್ವಸ್ಥರಾಗಿರದೆ ಸದಾ ಸುಸ್ತಾಗಿರುತ್ತೇವೆ. ನಾವು ಸ್ವಸ್ಥರಾಗಿರಬೇಕೆಂದರೆ ನಿತ್ಯ ಸತ್ಯ ಶುದ್ಧ ಕಾಯಕ ಮಾಡಿ, ಆ ಕಾಯಕದಿಂದ ದೊರೆತ ಪ್ರತಿಫಲದಲ್ಲಿ ಸ್ವಲ್ಪಾದರೂ ಸತ್ಕಾರ್ಯಗಳಿಗೆ ದಾಸೋಹ ಸಲ್ಲಿಸಬೇಕು. ಕಾಯಕ ಮಾಡುವುದರಿಂದ ದೈಹಿಕ ಶ್ರಮ ದೊರೆಯುವದು. ದಾಸೋಹ ಮಾಡುವುದರಿಂದ ಮನ ಪ್ರಸನ್ನವಾಗಿರುವುದು. ಇದರಿಂದ ನಾವು ಸ್ವಸ್ಥರಾಗಿರಲು ಸಾಧ್ಯವಾಗುತ್ತದೆ ಎಂದು ಬಸವ ತತ್ವಾಭಿಮಾನಿ, ಶಿವಸಂಗಮ ಗ್ರುಪ್ಸ್‌ನ ನಿರ್ದೇಶಕರಾದ ಎಂ.ಬಿ. ಲಿಂಗದಾಳ ಅಭಿಪ್ರಾಯಪಟ್ಟರು.

ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಚಿಂತನ ಕೂಟ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ 3ನೇ ಶ್ರಾವಣ ಸೋಮವಾರದ ಸಾಪ್ತಾಹಿಕ ವಚನ ಶ್ರಾವಣ ಕಾರ್ಯಕ್ರಮದಲ್ಲಿ ವಚನ ಚಿಂತನ ಮಾಡಿ, ನಾವು ಯಾವುದೇ ಕಾರ್ಯ ಮಾಡಲಿ ಅದನ್ನು ನಿಷ್ಠೆ, ಶ್ರದ್ಧೆ, ಭಕ್ತಿಯಿಂದ ಮಾಡಬೇಕು. ಕಾಯಕ ಯಾವದೇ ಇರಲಿ, ಕಾಯಕ ಮಾಡುವವರನ್ನು ಪ್ರೋತ್ಸಾಹಿಸಬೇಕು. ಅವರನ್ನು ಮೂದಲಿಸಬಾರದು, ನೋಡಿ ಅಸೂಯೆ ಪಡಬಾರದು. ಮೋಳಿಗೆ ಮಾರಯ್ಯ ತನ್ನ ಕಾಯಕದಲ್ಲಿಯೇ ದೇವರನ್ನು ಕಂಡುಕೊಂಡರು ಎಂದು ತಿಳಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಕೃಷಿ ವಿಜ್ಞಾನಿ ಡಾ. ಎಸ್.ಕೆ. ನಾಲತ್ವಾಡಮಠ ಮಾತನಾಡಿ, ಪ್ರಸ್ತುತ ದಿನಮಾನದಲ್ಲಿ ಕಾಯಕ ಪ್ರವೃತ್ತಿ ಮರೆಯಾಗುತ್ತಲಿದೆ. ಕಾಯಕ ಮಾಡಿದರೂ ಅದಕ್ಕೆ ಹೆಚ್ಚಿನ ಪ್ರತಿಫಲದ ಬೇಡಿಕೆ ಹೆಚ್ಚುತ್ತಲಿದೆ. ಈ ವಾತಾವರಣ ದೂರಾಗಲು ನಾವೆಲ್ಲ ಬಸವಾದಿ ಶರಣರ ಜೀನವನ್ನು ಅನುಕರಣೆ ಮಾಡಬೇಕೆಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಶ್ರೇಷ್ಠ ಉದ್ಯಮಿ, ಶ್ರೇಷ್ಠ ವರ್ತಕ ಪ್ರಶಸ್ತಿ ವಿಜೇತ, ಶ್ರೀ ದತ್ತಾ ಡೆವಲಪರ್ಸ್‌ನ ರೂವಾರಿ ಕಿರಣ ಪಿ.ಭೂಮಾ ಮಾತನಾಡಿ, ನಾವು ಮಾಡುವ ಕಾಯಕದಲ್ಲಿ ಮೋಸ, ವಂಚನೆಗಳಿರಬಾರದು. ಆ ಕಾಯಕ ಸಮಾಜೋನ್ನತಿಗೆ ಪೂರಕವಾಗಿರಬೇಕು ಮತ್ತು ತೃಪ್ತಿದಾಯಕವಾಗಿರಬೇಕೆಂದು ಹೇಳಿದರು. ಕಾರ್ಯಕ್ರಮದ ದಾಸೋಹ ಸೇವೆ ಮಹಾದೇವಿ ಚರಂತಿಮಠ, ವಿಜಯಲಕ್ಷ್ಮೀ ಉಪವಾಸಿ, ಪುಷ್ಪಾ ತಿಪ್ಪಶೆಟ್ಟಿ, ವಚನ ಸಂಗೀತ ಸೇವೆ ಸಲ್ಲಿಸಿದ ಜಯಶ್ರೀ ವಸ್ತ್ರದ ಇವರೆಲ್ಲರಿಗೂ ಗೌರವಾದರಗಳನ್ನು ಸಮರ್ಪಿಸಲಾಯಿತು. ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ, ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಉಪಸ್ಥಿತರಿದ್ದರು. ಸಭಾಂಗಣದಲ್ಲಿ ವಿ.ಎಂ. ಮುಂದಿನಮನಿ, ರವಿ ಹುಡೇದ, ಶಾಲಿನಿ ಮಾನ್ವಿ, ವೀಣಾ ಗೌಡರ, ವಿಜಯಲಕ್ಷ್ಮೀ ಮುಗಳಿ, ಅರುಣಾ ಇಂಗಳಳ್ಳಿ ಮುಂತಾದವರಿದ್ದರು. ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಲೋಚನಾ ಐಹೊಳ್ಳಿ ಸಾಮೂಹಿಕ ಬಸವ ಪ್ರಾರ್ಥನೆ ತಿಳಿಸಿದರು. ಮಹಾದೇವಿ ಚರಂತಿಮಠ ಧರ್ಮ ಗ್ರಂಥ ಪಠಣ ಮಾಡಿದರು. ಡಾ. ಎಂ.ವ್ಹಿ. ಐಹೊಳ್ಳಿ ಸ್ವಾಗತ ಕೋರಿದರು. ವಿಜಯಾ ಚನ್ನಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಎಸ್.ಬಿ. ಗೌಡರ ವಂದಿಸಿದರು.

# ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕುರುವಿನಶೆಟ್ಟಿ ಸಮಾಜವು ಶ್ರಮಿಕ, ಕಾಯಕ ಸಮಾಜವಾಗಿದೆ ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದಲ್ಲಿ ಕುರುವಿನಶೆಟ್ಟಿ ಸಮಾಜದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಶಂಕರ ಶಿವಾಚಾರ್ಯ ಮಾಹಾಸ್ವಾಮಿಗಳ ಪುಣ್ಯಾರಾಧನೆಯಲ್ಲಿ ಮಕ್ಕಳಿಗೆ ಸನ್ಮಾನಿಸಿ ಮಾತನಾಡಿದರು.

ನೇಕಾರಿಕೆ ಇವರ ಕುಲ ಕಸುಬಾಗಿದ್ದು, ಇವರು ಕಾಯಕ ತತ್ವದಡಿ ಬದುಕಿದವರು. ನಿತ್ಯ ಕಾಯಕ ಯೋಗ ಮಾಡಿ ಸುಂದರ ಬದುಕು ಕಟ್ಟಿಕೊಂಡವರು. ಈಗ ಮಕ್ಕಳಿಗೆ ಉತ್ತಮ ಸಂಸ್ಕಾರ, ಉತ್ತಮ ಶಿಕ್ಷಣ ನೀಡುವುದು ಅಗತ್ಯವಿದೆ ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಹುಬ್ಬಳ್ಳಿಯ ವೀರಭಿಕ್ಷಾವರ್ತಿ ಶಿವಶಂಕರ ಮಾಹಾಸ್ವಾಮೀಜಿ ಮಾತನಾಡಿ, ಆಧುನಿಕ ತಂತ್ರಜ್ಞಾನ ಬೆಳೆದಂತೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸಮಾಜದ ಉತ್ತಮ ಪ್ರಜೆಗಳನ್ನಾಗಿ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ಅಧ್ಯಕ್ಷತೆಯನ್ನು ಮಾಹಾರುದ್ರಪ್ಪ ಯಾವಗಲ್ಲ ವಹಿಸಿದ್ದರು. ಹನಮಂತಪ್ಪ ಕೊಂಡಿಕೊಪ್ಪ, ವೀರಭದ್ರಪ್ಪ ಹರ್ತಿ, ಗುರುಪಾದಪ್ಪ ದಂಡಿ, ಸಿದ್ದಪ್ಪ ಡಂಬಳ, ಶ್ರೀಧರ ಚಿನಗುಂಡಿ, ಡಾ. ಎಸ್.ಸಿ. ಚವಡಿ, ರಾಮಣ್ಣಾ ಕಮಾಜಿ, ಸಂಜಯ ನೀಲಗುಂದ, ಕೆ.ಎಲ್. ಕರಿಗೌಡರ, ಶಿವಬಸವ ಹಸಬಿ, ಕೃಷ್ಣಾ ನಾಗಲೋಟಿ, ಅಮರಯ್ಯ ನೀಲಕಂಠಮಠ, ಶಿವಪ್ಪ ಹರ್ತಿ, ಮಾಹಾದೇವಪ್ಪ ಹಳ್ಳಿ ಇದ್ದರು.

# ಸ್ಮಾರಕಗಳ ರಕ್ಷಣೆ ನಮ್ಮೆಲ್ಲರ ಹೊಣೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಐತಿಹಾಸಿಕ ಸ್ಮಾರಕಗಳು ದೇಶದ ಅಮೂಲ್ಯ ಸ್ವತ್ತುಗಳಾಗಿದ್ದು. ಅವುಗಳನ್ನು ರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಸಾಹಿತಿ ಬಿ.ಕೆ. ಹರಪನಹಳ್ಳಿ ಹೇಳಿದರು.

ಅವರು ಪಟ್ಟಣದ ನಗರೇಶ್ವರ ದೇವಾಲಯದಲ್ಲಿ ಬ್ರಾಹ್ಮಣ ಸಮಾಜದ ವತಿಯಿಂದ ರಾಘವೇಂದ್ರ ಸ್ವಾಮಿಗಳ 354ನೇ ಆರಾಧನೆ ಕಾರ್ಯಕ್ರಮದಲ್ಲಿ ಮಾತನಾಡಿ, ಗುರು ರಾಘವೇಂದ್ರ ಸ್ವಾಮಿಗಳು 16ನೇ ಶತಮಾನದ ಸಂತರು. ಇವರು ಭಕ್ತರ ಕಷ್ಟ ಕಾರ್ಪಣ್ಯಗಳನ್ನು ದೂರ ಮಾಡುವ ದೈವಿಕ ಶಕ್ತಿ ಹೊಂದಿರುವ ಸಂತರಾಗಿದ್ದರು. ಇತಿಹಾಸದ ಅರಿವು ಭವಿಷ್ಯದ ಭವ್ಯ ಸಂಸ್ಕೃತಿಯ ಸೃಷ್ಟಿಗೆ ನೆರವಾಗುತ್ತದೆ. ಹೀಗಾಗಿ ನಮ್ಮ ಸುತ್ತಲಿನ ಪರಂಪರಾನುಗುತವಾದ ದೇವಾಲಯಗಳನ್ನು ಹಾಗೂ ವಾಸ್ತು ಶೀಲ್ಪವನ್ನು ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಹೊಣೆ ಎಂದರು.

ಈ ಸಂದರ್ಭದಲ್ಲಿ ರಾಮಣ್ಣಾ ಕಮಾಜಿ, ಪ.ಪಂ ಸದಸ್ಯ ಇಮ್ಮಣ್ಣಾ ಶೇಖ, ಅಶೋಕ ಸೋನಗೋಜಿ, ಮನ್ಸೂರ ಹಣಗಿ, ವೆಂಕಟೇಶ, ಮಾಲತಿ, ಉಮೇಶ ಪಾಟೀಲ, ಅಜೀತ ಪೂಜಾರ, ಕಾರ್ತಿಕ ಹೊಸರಕರ, ಮಂಜುನಾಥ ಕಾಗಿ, ಬ್ರಾಹ್ಮಣ ಸಮಾಜದ ಗುರು-ಹಿರಿಯರು ಇದ್ದರು.

# ಟಿಎಪಿಸಿಎಂಎಸ್ ಪ್ರತಿನಿಧಿಯಾಗಿ ಮಡ್ಡಿ ನಾಗರಾಜ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕು ಟಿಎಪಿಸಿಎಂಎಸ್ ಚುನಾವಣಾ ಪ್ರತಿನಿಧಿಯಾಗಿ ಬೆಣ್ಣಿಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಿಂದ ಹೋಬಳಾಪುರದ ಮಡ್ಡಿ ನಾಗರಾಜ ಆಯ್ಕೆಗೆ ಸಹಕರಿಸಿದ ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ವೈ.ಡಿ. ಅಣ್ಣಪ್ಪ ಅವರನ್ನು ಮುಖಂಡರು ಬುಧವಾರ ಪಟ್ಟಣದಲ್ಲಿ ಸನ್ಮಾನಿಸಿ ಗೌರವಿಸಿದರು.



ಸನ್ಮಾನ ಸ್ವೀಕರಿಸಿ ಮಾತನಾಡಿದ ವೈ.ಡಿ. ಅಣ್ಣಪ್ಪ, ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಗಳಿಗೆ ಅಕ್ಟೋಬರ್ 26ರಂದು ನಡೆಯುವ ಚುನಾವಣೆಗೆ ತಾಲೂಕಿನ ವಿವಿಧ ಸೊಸೈಟಿಗಳಿಂದ ಪ್ರತಿನಿಧಿಗಳನ್ನು ಆಯ್ಕೆ ಮಾಡಲಾಗುತ್ತಿದೆ. ಅದರಂತೆ ಬೆಣ್ಣಿಹಳ್ಳಿ ಸೊಸೈಟಿಯಿಂದ ನಾಗರಾಜರನ್ನು ಆಯ್ಕೆ ಮಾಡಲಾಗಿದ್ದು, ಇವರ ಆಯ್ಕೆಗೆ ಬೆಂಬಲಿಸಿದ ನಿರ್ದೇಶಕರಿಗೆ ಹಾಗೂ ಮುಖಂಡರಿಗೆ ಧನ್ಯವಾದ ತಿಳಿಸಿದರು.

ಹೊಸಪೇಟೆ ಯೂನಿಯನ್ ಬ್ಯಾಂಕ್‌ಗೆ ಪ್ರತಿನಿಧಿಯಾಗಿ ಆಯ್ಕೆಯಾದ ಎಂ.ಬಸವರಾಜರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಮುತ್ತಿಗಿ ಜಂಬಣ್ಣ, ವಿಎಸ್‌ಎಸ್‌ಎನ್ ಅಧ್ಯಕ್ಷ ನಾಗನಗೌಡ, ನಿರ್ದೇಶಕರಾದ ಬಡಿಗೇರ ದುರುಗಪ್ಪ, ಸಿ.ಕೆಂಚನಗೌಡ, ಜಗದೀಶ, ಬಸವರಾಜ, ನೈರುತ್ಯ ರೈಲ್ವೆ ಸಮಿತಿ ಸದಸ್ಯ ಬಿ.ಸಿದ್ದನಗೌಡ, ಗ್ರಾ.ಪಂ ಸದಸ್ಯ ಬಿ.ಸಂತೋಷ, ಮುಖಂಡರಾದ ಎಸ್.ಕರಿಬಸಪ್ಪ ಚಿಗಟೇರಿ ಜಂಬಣ್ಣ, ಸಿ.ರಾಮಪ್ಪ, ಬಿ.ಸುರೇಶ, ಕಡಬಗೇರಿ ಬಸವರಾಜ, ಬಿಸಿದ್ದನಗೌಡ, ಡಿ.ಸುರೇಶ, ನೂರುದ್ದೀನ್, ಯಾಸೀನ್ ಷರೀಫ್, ಭೋವಿ ದುರುಗಪ್ಪ, ಎಸ್.ಪ್ರಕಾಶ, ಚಂದ್ರಪ್ಪ, ಕರಿಬಸವನಗೌಡ, ಎಸ್.ಅನಂದಪ್ಪ, ಸುರೇಶ್ ಮುಂತಾದವರಿದ್ದರು.

# ದತ್ತಾ ಪ್ರೈಮ್ ಬಿಸಿನೆಸ್ ಸೆಂಟರ್ ಉದ್ಘಾಟನೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ದತ್ತಾ ಗ್ರೂಪ್ ವತಿಯಿಂದ ನೂತನವಾಗಿ ಗದಗ ನಗರದ ಮುಳಗುಂದ ರಸ್ತೆಯಲ್ಲಿ ನಿರ್ಮಾಣಗೊಂಡಿರುವ ವ್ಯಾಪಾರಿ ಸಮುಚ್ಚಯ ದತ್ತಾ ಪ್ರೈಮ್ ಬಿಸಿನೆಸ್ ಸೆಂಟರ್‌ನ ಉದ್ಘಾಟನಾ ಸಮಾರಂಭ ಆಗಸ್ಟ್ 17ರ ಬೆಳಿಗ್ಗೆ 11 ಗಂಟೆಗೆ ಜರುಗಲಿದೆ.

ಸಮಾರಂಭದ ಸಾನ್ನಿಧ್ಯವನ್ನು ತೋಂಟದಾರ್ಯ ಮಠದ ಡಾ. ತೋಂಟದ ಸಿದ್ಧರಾಮ ಶ್ರೀಗಳು ವಹಿಸುವರು. ಸಂಸದ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟನೆ ನೇರವೇರಿಸುವರು. ಕಾನೂನು ಸಚಿವ ಎಚ್.ಕೆ. ಪಾಟೀಲ ದತ್ತಾ ಪ್ರೈಮ್ ಬಿಸಿನೆಸ್ ಸೆಂಟರ್ ಉದ್ಘಾಟಿಸುವರು. ಶಾಸಕರಾದ ಸಿ.ಸಿ. ಪಾಟೀಲ, ಜಿ.ಎಸ್. ಪಾಟೀಲ, ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಬಿ. ಶ್ರೀರಾಮುಲು, ವಿ.ಪ ಸದಸ್ಯ ಎಸ್.ವ್ಹಿ. ಸಂಕಂನೂರ, ಬೆಳಗಾವಿ ಕೆ.ಎಲ್.ಇ ಸಂಸ್ಥೆಯ ನಿರ್ದೇಶಕ ಶಂಕರಣ್ಣ ಮುನವಳ್ಳಿ, ಮಹಾಂತೇಶ ಕವಟಗಿಮಠ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ದಾವಣಗೇರಿಯ ಉದ್ಯಮಿ ಬಿ.ಸಿ. ಉಮಾಪತಿ, ಕ್ರಿಯೇಟಿವ್ ಆರ್ಕಿಟೆಕ್ಟ್ ದೀಪಾ ಕುಲಕರ್ಣಿ, ಮಂಗಳೂರಿನ ನ್ಯೂ ಭಾರತ ಇನ್‌ಫ್ರಾಸ್ಟ್ರಕ್ಚರ್ ಗುತ್ತಿಗೆದಾರ ಮಹಮದ ಮುಸ್ತಫಾ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದತ್ತಾ ಗ್ರೂಪ್‌ನ ವ್ಯವಸ್ಥಾಪಕ ನಿರ್ದೇಶಕ ಕಿರಣ ಭೂಮಾ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಲಕ್ಷ್ಮೇಶ್ವರ ತಾಲೂಕಾಡಳಿತದಿಂದ ಸ್ವಾತಂತ್ರ್ಯೋತ್ಸವ ದಿನಾಚರಣೆ

# ನವಭಾರತ ನಿರ್ಮಾಣದ ಸಂಕಲ್ಪದೊಂದಿಗೆ ಮುನ್ನಡೆಯೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬ್ರಿಟಿಷರ ಕಪಿಮುಷ್ಠಿಯಿಂದ ಭಾರತವನ್ನು ಮುಕ್ತಗೊಳಿಸುವಲ್ಲಿ ಅನೇಕ ಮಹನೀಯರು ಹೋರಾಟ, ತ್ಯಾಗ, ಬಲಿದಾನ ಮಾಡಿದ್ದಾರೆ. ದೇಶದ ಪ್ರತಿಯೊಬ್ಬ ಪ್ರಜೆಯೂ ದೇಶದ ಸರ್ವತೋಮುಖ ಅಭಿವೃದ್ಧಿ ಹಾಗೂ ದೇಶದೊಳಗಿನ ಆಂತರಿಕ ಸಮಸ್ಯೆಗಳ ನಿಗ್ರಹಕ್ಕಾಗಿ ಜಾತಿ, ಧರ್ಮ, ಪಕ್ಷ ಭೇದಭಾವ ಬದಿಗೊತ್ತಿ ನಾವೆಲ್ಲ ಭಾರತ ಮಾತೆಯ ಮಕ್ಕಳೆಂಬ ಒಗ್ಗಟ್ಟಿನ ಮಂತ್ರ, ನವಭಾರತ ನಿರ್ಮಾಣದ ಸಂಕಲ್ಪದೊಂದಿಗೆ ಮುನ್ನಡೆಯಬೇಕಾಗಿದೆ ಎಂದು ತಹಸೀಲ್ದಾರ ಧನಂಜಯ ಎಂ ಹೇಳಿದರು.

ಅವರು ಪಟ್ಟಣದ ಉಮಾವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಲಕ್ಷ್ಮೇಶ್ವರ ತಾಲೂಕಾಡಳಿತದಿಂದ ನಡೆದ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ವಿಜ್ಞಾನ, ತಂತ್ರಜ್ಞಾನ, ಶಿಕ್ಷಣ, ಆರೋಗ್ಯ, ಕೃಷಿ ಹೀಗೆ ಎಲ್ಲ ಕ್ಷೇತ್ರಗಳಲ್ಲಿ ವಿಶ್ವದ ಗಮನ ಸೆಳೆದಿರುವ ಭಾರತವೂ ಸಹ ಅನಕ್ಷರತೆ, ಅಪೌಷ್ಠಿಕತೆ, ಅನಾರೋಗ್ಯ, ಭ್ರಷ್ಟಾಚಾರ, ಭಯೋತ್ಪಾದನೆ, ಜಾತೀಯತೆ, ಕೋಮುವಾದ ಅನೇಕ ಜ್ವಲಂತ ಸಮಸ್ಯೆಗಳನ್ನು ಎದುರಿಸುತ್ತಿದೆ ಎಂದು ಒಪ್ಪಲೇಬೇಕು. ಈ ದೇಶದ ಸಂಪತ್ತಾದ ಯುವ ಜನಾಂಗ ದುಶ್ಚಟ, ಕಾನೂನು ಬಾಹಿರ ಚಟುವಟಿಕೆಗಳಿಂದ



ದೂರವಿದ್ದು ಪ್ರಜ್ಞಾವಂತಿಕೆಯಿಂದ ದೇಶದ ಶ್ರೇಷ್ಠತೆ, ಏಕತೆ, ಸ್ವಚ್ಛತೆ, ಪ್ರಗತಿಗಾಗಿ ಸಂಕಲ್ಪತೈಯಬೇಕು ಎಂದರು.

ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಮಾತನಾಡಿ, ನನ್ನ ದೇಶ, ನನ್ನ ಜನ, ನಾವು ಭಾರತಾಂಬೆಯ ಮಕ್ಕಳು ಎಂಬ ದೇಶಭಕ್ತಿ ಮೂಡಿ ಈ ದೇಶದ ಶಕ್ತಿಯಾಗಿರುವ ರೈತ, ಸೈನಿಕ ಮತ್ತು ಶಿಕ್ಷಕರನ್ನು ಸದಾ ಗೌರವದಿಂದ ಕಾಣಬೇಕು. ದೇಶದ ಸ್ವಾತಂತ್ರ ಹೋರಾಟದಲ್ಲಿ ಲಕ್ಷ್ಮೇಶ್ವರ ಸೇರಿ ತಾಲೂಕಿನ ಶಿಗ್ಲಿ, ಸೂರಣಗಿ, ಬಾಲೇಹೊಸೂರ, ಕೂಗನೂರ ಮುಂತಾದ ಅನೇಕ ಗ್ರಾಮಗಳ ನೂರಾರು ಹೋರಾಟಗಾರರು ತಮ್ಮನ್ನೇ ಸಮರ್ಪಿಸಿಕೊಂಡಿದ್ದಾರೆ. ಸ್ವಾತಂತ್ರ್ಯೋತ್ಸವದ ದಿನ ದೇಶದ ಭವಿಷ್ಯದ ಕನಸುಗಳ ಸಾಕಾರಕ್ಕೆ ಕೈಜೋಡಿಸುವ ಸಂಕಲ್ಪ ಮತ್ತು ದೇಶಕ್ಕಾಗಿ ನಮ್ಮದೇನು ಕೊಡುಗೆ ಎಂಬ ಆತ್ಮಾವಲೋಕನ ನಮ್ಮೆಲ್ಲರದ್ದಾಗಬೇಕು ಎಂದರು. ಧ್ವಜಾರೋಹಣದ ಬಳಿಕ ಮೈದಾನದಲ್ಲಿ ಪೊಲೀಸ್, ಎನ್‌ಸಿಸಿ ಹಾಗೂ ವಿವಿಧ ಶಾಲಾ ವಿದ್ಯಾರ್ಥಿಗಳಿಂದ ಆಕರ್ಷಕ ಪಥಸಂಚಲನ ನಡೆಯಿತು. ಪಥಸಂಚಲನದ ನೇತೃತ್ವವನ್ನು ಪಿಎಸ್‌ಐ ನಾಗರಾಜ ಗಡಾದ ವಹಿಸಿ ನೆರವೇರಿಸಿದರು. ವಿವಿಧ ಶಾಲಾ ಮಕ್ಕಳಿಂದ, ಬಿ.ಡಿ ತಟ್ಟಿ ಹಾಗೂ ಅರಳು ವಿಶೇಷ ಚೇತನ ಮಕ್ಕಳಿಂದ ನಡೆದ ವೇಷ-ಭೂಷಣ, ದೇಶಭಕ್ತಿ ಗೀತೆಗಳ ನೃತ್ಯ ಎಲ್ಲರ ಗಮನ ಸೆಳೆಯಿತು. ಸ್ಕೂಲ್ ಚಂದನ ಶಾಲೆಯ ಮಕ್ಕಳ ವಿಶೇಷ ಬ್ಯಾಂಡ್ ಪ್ರದರ್ಶನ ಸ್ವಾತಂತ್ರ್ಯೋತ್ಸವದ ಕಳೆ ಹೆಚ್ಚಿಸಿತು. ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಸದಸ್ಯ ಮಹೇಶ ಹೊಗೆಸೊಪ್ಪಿನ, ಗ್ಯಾರಂಟಿ ಸಮಿತಿ ಸದಸ್ಯರಾದ ರಾಮಣ್ಣ ಲಮಾಣಿ, ಶಿವರಾಜಗೌಡ ಪಾಟೀಲ, ಗ್ರೇಡ್ 2 ತಹಸೀಲ್ದಾರ ಮಂಜುನಾಥ ಅಮಾಸಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಎಪಿಎಂಸಿ ಕಾರ್ಯದರ್ಶಿ ರುದ್ರಗೌಡ ಪಾಟೀಲ, ಉಪನೋಂದಣಾಧಿಕಾರಿ ಎಸ್.ಕೆ. ಜಲರಡ್ಡಿ, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ನೌಕರ ಸಂಘದ ಅಧ್ಯಕ್ಷ ಗುರುರಾಜ ಹವಳದ ಸೇರಿ ಪುರಸಭೆ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕವೃಂದ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.


ಕಂದಾಯ ನಿರೀಕ್ಷಕ ಎಸ್.ಎ ನದಾಫ್ ಸ್ವಾಗತಿಸಿದರು. ಶಿಕ್ಷಣ ಇಲಾಖೆಯ ಈಶ್ವರ ಮೆಡ್ಲೇರಿ, ಸತೀಶ ಬೋಮಲೆ, ಉಮೇಶ ನೇಕಾರ, ಎನ್.ಎ. ಮುಲ್ಲಾ ನಿರ್ವಹಿಸಿದರು.

ಸ್ವಾತಂತ್ರ್ಯೋತ್ಸವದ ಅಂಗವಾಗಿ ನಡೆದ ರಸಪ್ರಶ್ನೆ, ವೇಷಭೂಷಣ ಇತ್ಯಾದಿ ಸ್ಪರ್ಧೆಗಳ ವಿಜೇತರಿಗೆ ಪಾರಿತೋಷಕ, ಪ್ರಮಾಣ ಪತ್ರ ನೀಡಲಾಯಿತು. ಪಂಥಸಂಚಲನ ಸ್ಪರ್ಧೆಯಲ್ಲಿ ದಿ ಯೂನಿಕ್ ಶಾಲೆ-ಪ್ರಥಮ, ಲಿಟಲ್ ಹಾರ್ಟ್ಸ್ ಸ್ಕೂಲ್-ದ್ವಿತೀಯ, ದೂದಪೀರಾಂ ಉರ್ದು ಶಾಲೆ-ತೃತೀಯ ಸ್ಥಾನ ಪಡೆದವು. ನೃತ್ಯ ಸ್ಪರ್ಧೆಯಲ್ಲಿ ಎಸ್‌ಟಿಪಿಎಂಬಿ-ಪ್ರಥಮ, ಪಿಎಸ್‌ಬಿಡಿ-ದ್ವಿತೀಯ, ಬಿಸಿಎನ್ ತಂಡದವರು ತೃತೀಯ ಸ್ಥಾನ ಪಡೆದರು.

# ಸಂಗೊಳ್ಳಿ ರಾಯಣ್ಣ ಮೂರ್ತಿ ಪ್ರತಿಷ್ಠಾಪನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಗುರುವಾರ ಸ್ವತಂತ್ರ ಸೇನಾನಿ ಸಂಗೊಳ್ಳಿ ರಾಯಣ್ಣನ ಮೂರ್ತಿ ಪ್ರತಿಷ್ಠಾಪಿಸಲಾಯಿತು. ಪಟ್ಟಣಕ್ಕೆ ಆಗಮಿಸಿದ್ದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ರಾಯಣ್ಣನ ಮೂರ್ತಿಗೆ ಪುಷ್ಪ ಮಾಲೆ ಸಮರ್ಪಿಸಿ ನಮಿಸಿದರು.



ಪಟ್ಟಣದಲ್ಲಿ ಸಂಗೊಳ್ಳಿ ರಾಯಣ್ಣ ವೃತ್ತ ನಿರ್ಮಾಣವಾಗಿ ಮೂರ್ತಿ ಪ್ರತಿಷ್ಠಾಪನೆಯಾಗಬೇಕು ಎಂಬ ರಾಯಣ್ಣನ ಅಭಿಮಾನಿಗಳ ಬೇಡಿಕೆ ಆಸೆ ಈಡೇರಿದಂತಾಗಿದೆ ಎಂದು ಅಭಿಮಾನಿ ಬಳಗದವರು ಪಟಾಕಿ ಸಿಡಿಸಿ, ಸಿಹಿ ವಿತರಿಸಿ ಸಂಭ್ರಮಿಸಿದರು.

ಈ ವೇಳೆ ಮಾಜಿ ಶಾಸಕರುಗಳಾದ ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಸಂಗೊಳ್ಳಿ ರಾಯಣ್ಣ ವೇದಿಕೆ ರಾಜ್ಯಾಧ್ಯಕ್ಷ ಸುರೇಶ ಗೋಕಾವಿ, ಎಂ.ಆರ್. ಪಾಟೀಲ, ಲೆಂಕೆಪ್ಪ ಶರಸೂರಿ, ಮಂಜುನಾಥ ಮಾಗಡಿ, ವಿಜಯಕುಮಾರ ಹತ್ತಿಕಾಳ, ಸುನೀಲ ಮಹಾಂತಶೆಟ್ಟರ, ವಿಜಯ ಕುಂಬಾರ, ಗಂಗಾಧರ ಮೆಣಸಿನಕಾಯಿ, ನವೀನ ಹಿರೇಮಠ, ಪ್ರವೀಣ ಬೋಮಲೆ, ಬಸವರಾಜ ಹಿರೇಮನಿ, ಸುರೇಶ ಹಟ್ಟಿ, ಭರಮಣ್ಣ ಶರಸೂರಿ, ಮಂಜು ಮುಳಗುಂದ, ವೆಂಕಪ್ಪ ಬಸಾಪೂರ, ಮೈಲಾರಿ ಹೆಗ್ಗಣ್ಣವರ, ಮಹಾಂತೇಶ ಗುಂಜಳ, ಶಿವು ಹೊಂಬಳ, ಸಂತೋಷ ಗದ್ದಿ, ಸಂತೋಷ ಬಾಲೇಹೊಸೂರು, ಆನಂದ ಗದ್ದಿ, ನಿಂಗಪ್ಪ ಕುರಹಟ್ಟಿ, ರಾಜು ಗದ್ದಿ, ಮಹೇಶ ಬಸಾಪೂರ, ಸುರೇಶ ಸೂರಣಗಿ, ಮಂಜುನಾಥ ಘಂಟಿ, ಭಾಗ್ಯಶ್ರೀ ಬಾಬಣ್ಣ ಸೇರಿ ಹಲವರಿದ್ದರು.


### ಸಂದಿಗವಾಡ ಗ್ರಾಮದಲ್ಲಿ ಛಾವಡಿ, ಅರಿವು ಕೇಂದ್ರ ಉದ್ಘಾಟಿಸಿದ ಚಂದ್ರಶೇಖರ ಕಂದಕೂರ

# ಸಂಸ್ಕಾರಯುತ ಬದುಕಿಗೆ ಶಿಕ್ಷಣ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ರೋಣ

ಮಲ್ಲಾಪೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಂದಿಗವಾಡ ಗ್ರಾಮದಲ್ಲಿ ಗ್ರಾ.ಪಂ ಅನುದಾನದಡಿಯಲ್ಲಿ ಅಭಿವೃದ್ಧಿಪಡಿಸಲಾದ ಗ್ರಾಮ ಛಾವಡಿ ಮತ್ತು ಅರಿವು ಕೇಂದ್ರ (ಗ್ರಂಥಾಲಯ)ದ ಉದ್ಘಾಟನಾ ಸಮಾರಂಭವು ಗುರುವಾರ ವಿಜೃಂಭಣೆಯಿಂದ ನಡೆಯಿತು.

ತಹಸೀಲ್ದಾರ ನಾಗರಾಜ್ ಕೆ ರೋಣ ಗ್ರಾಮ ಆಡಳಿತ ಅಧಿಕಾರಿ ಕೊಠಡಿಯನ್ನು ಉದ್ಘಾಟಿಸಿ, ಕರ್ನಾಟಕ ಸರಕಾರದ ಪೋತಿ ಖಾತೆ ಕಾರ್ಯಕ್ರಮ ದಡಿ ರಾಜ್ಯದ ಮೊದಲ ಪೋತಿ ಖಾತೆಯಾಗಿ ಈ ಕೊಠಡಿ ಆಗಿದೆ. ಗ್ರಾಮಸ್ಥರು ಈ ಸೌಲಭ್ಯದ ಸದುಪಯೋಗವನ್ನು ಪಡೆಯಬೇಕೆಂದು ಕರೆ ನೀಡಿದರಲ್ಲದೆ, ಕಂದಾಯ ಇಲಾಖೆಯ ಸಿಬ್ಬಂದಿಗಳಿಗೆ ಹಾಗೂ ಗ್ರಾಮ ಆಡಳಿತ ಅಧಿಕಾರಿ ವಾಯ್.ಡಿ. ಬಡಿಗೇರರಿಗೆ ಅಭಿನಂದನೆ ಸಲ್ಲಿಸಿದರು.



ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಅರಿವು ಕೇಂದ್ರದ ಕೊಠಡಿಯನ್ನು ಉದ್ಘಾಟಿಸಿ ಮಾತನಾಡಿ, ಮಕ್ಕಳು, ಯುವಕರು ಹಾಗೂ ವಯಸ್ಕರು ಮೊಬೈಲ್‌ನಿಂದ ದೂರವಿದ್ದು, ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಸಂಸ್ಕಾರಯುತ ಬದುಕಿಗೆ ಶಿಕ್ಷಣ ಅತ್ಯಗತ್ಯ. ಎಲ್ಲರೂ ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಬೇಕು. ಶಿಕ್ಷಣದಲ್ಲಿ ಶಿಕ್ಷೆ ಮತ್ತು ಬಹುಮಾನ ಎರಡೂ ಅವಶ್ಯಕ. ಶಿಕ್ಷಕರು ಮಕ್ಕಳನ್ನು ಶಿಸ್ತಿನಿಂದ ಕಲಿಸಿದಾಗ ಪೋಷಕರು ವಿರೋಧಿಸಬಾರದು. ಈಗ ಶಿಕ್ಷಕರು ಬುದ್ಧಿ ಕಲಿಸದಿದ್ದರೆ, ಮುಂದೆ ಪೊಲೀಸ್ ಸ್ಟೇಷನ್‌ನಲ್ಲಿ ಬುದ್ಧಿ ಕಲಿಯಬೇಕಾಗುತ್ತದೆ ಎಂದರು. ಕಾರ್ಯಕ್ರಮದ ಧಾರ್ಮಿಕ ಸಾನ್ನಿಧ್ಯವನ್ನು ವೇ.ಮೂ. ಸಿದ್ದಯ್ಯ ಹಿರೇಮಠ, ಅಧ್ಯಕ್ಷತೆಯನ್ನು ಹನಮಂತಗೌಡ ಹೂಲ್ಲೂರ ವಹಿಸಿದ್ದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ಕರಿಯಮ್ಮ ಚಲವಾದಿ, ಸದಸ್ಯರಾದ ಬಸಮ್ಮ ಟಕ್ಕೆದ, ಕಸ್ತೂರೆವ್ವ ಜಂಪಣ್ಣನವರ, ಮೈಲಾರಪ್ಪ ಕರಿಲಿಂಗಣ್ಣವರ, ಕಮಲಾಕ್ಷಿ ಭರಮಗೌಡ್ರ, ದ್ರಾಕ್ಷಾಯಣಿ ಹಡಪದ, ಸುಮಂಗಲಾ ಕೊಳ್ಳದ, ಗಿರಿಜವ್ವ ಹಟ್ಟಿ, ವಿಕ್ರಮ ದಾನರಡ್ಡಿ, ಯಲ್ಲಪ್ಪ ಮಳಗಿ, ವೀರನಗೌಡ ಕಟ್ಟಿ, ಸುರೇಶ ವತ್ತಟ್ಟಿ ಸೇರಿದಂತೆ ಗ್ರಾಮದ ಹಿರಿಯರು, ಗುರುಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ಡಿ.ಎಸ್. ಹಂಚಿನಾಳ ಸ್ವಾಗತಿಸಿದರು. ಮುತ್ತು ಅರಹುಣಸಿ ವಂದಿಸಿದರು.

### ವರವಿ ಶ್ರೀ ಮೌನೇಶ್ವರರ ಜಾತ್ರಾ ಮಹೋತ್ಸವದ ಆಮಂತ್ರಣ ಪತ್ರಿಕೆ ಬಿಡುಗಡೆ

# ವರವಿ ಶ್ರೀ ಮೌನೇಶ್ವರರ ರಥೋತ್ಸವ ಆ.18ರಿಂದ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶ್ರಾವಣ ಮಾಸದ ಕಡೆಯ ಸೋಮವಾರವಾದ ಆಗಸ್ಟ್ 18ರಂದು ಶಿರಹಟ್ಟಿ ತಾಲೂಕಿನ ಸುಕ್ಷೇತ್ರ ವರವಿ ಶ್ರೀ ಮೌನೇಶ್ವರರ ಜಾತ್ರೆಯು ನಡೆಯಲಿದೆ ಎಂದು ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುಂದ ಹೇಳಿದರು.

ಅವರು ಗುರುವಾರ ಶಿರಹಟ್ಟಿಯ ಪ್ರವಾಸಿಮಂದಿರದಲ್ಲಿ ವರವಿ ಶ್ರೀ ಮೌನೇಶ್ವರರ ಜಾತ್ರಾ ಮಹೋತ್ಸವದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು.

ಆ.18ರ ಸೋಮವಾರ ಬೆಳಿಗ್ಗೆ 6.15ಕ್ಕೆ ಧ್ವಜಾರೋಹಣ, 9ರಿಂದ 11ರವರೆಗೆ ಮಹಾಯಜ್ಞ, ಮಧ್ಯಾಹ್ನ 12.15ಕ್ಕೆ ಜಾತ್ರಾ ಮಹೋತ್ಸವದ ಉದ್ಘಾಟನಾ ಸಮಾರಂಭ ನೆರವೇರಲಿದೆ. ಸಾನ್ನಿಧ್ಯವನ್ನು ಕ್ಷೇತ್ರ ಮೌನೇಶ್ವರ ಸ್ವಾಮೀಜಿ ವಹಿಸಲಿದ್ದು, ಅಧ್ಯಕ್ಷತೆಯನ್ನು ಟ್ರಸ್ಟ್ ಅಧ್ಯಕ್ಷ ಮೋಹನ ನರಗುಂದ ವಹಿಸುವರು. ಉದ್ಘಾಟನೆಯನ್ನು ಸಾರಿಗೆ ಹಾಗೂ ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ನೆರವೇರಿಸುವರು. ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಗಂಗಣ್ಣ ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ವಿಶ್ವನಾಥ ಕಪ್ಪತ್ತನವರ, ನಿವೃತ್ತ ಎಸ್‌ಪಿ ಎ.ಆರ್. ಬಡಿಗೇರ, ತಹಸೀಲ್ದಾರ ಕೆ.ರಾಘವೇಂದ್ರರಾವ್, ಸಿಪಿಐ ನಾಗರಾಜ ಮಾಢಳ್ಳಿ, ಪಿಎಸ್‌ಐ ಚನ್ನಯ್ಯ ದೇವೂರ ಆಗಮಿಸುವರು. ವಿಶೇಷ ಆಹ್ವಾನಿತರಾಗಿ ಹಿರಿಯ ಸಾಹಿತಿ ಡಿ.ವಿ. ಬಡಿಗೇರ, ಬೆಂಗಳೂರಿನ ಮಂಚನಹಳ್ಳಿ ರೇಣುಕಾ ಯಲ್ಲಮ್ಮ ದೇವಸ್ಥಾನದ ಅಧ್ಯಕ್ಷ ಸರ್ವೆಶ ಆಚಾರ, ವಿಶ್ವಕರ್ಮ ಸಮಾಜದ ಮುಖಂಡ ಈಶ್ವರ ಹೊಸಕೋಟಿ, ಖಾದಿ ಆಶ್ರಮದ ಮುಖ್ಯಸ್ಥ ಶಿವಪ್ರಸಾದ ಉಪಸ್ಥಿತರಿರಲಿದ್ದಾರೆ. ಸಂಜೆ 5.15ಕ್ಕೆ ರಥೋತ್ಸವ, 7.15ರಿಂದ ಶಹಪೂರದ ಕಾಳಹಸ್ತೇಂದ್ರ ಮಹಾಸ್ವಾಮೀಜಿಗಳಿಂದ ಶ್ರೀ ಮೌನೇಶ್ವರ ಲೀಲಾ ವಿಲಾಸ ಪ್ರವಚನ, ರಾತ್ರಿ 8.15ಕ್ಕೆ ಸಾಂಸ್ಕೃತಿಕ ಹಾಗೂ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಮದು ತಿಳಿಸಿದರು.



ರಾಜ್ಯ ಹಾಗೂ ಹೊರರಾಜ್ಯಗಳಿಂದ ಮತ್ತು ನೆರೆಯ ಜಿಲ್ಲೆಗಳಿಂದ ಬರುವ ಭಕ್ತರ ಅನುಕೂಲಕ್ಕಾಗಿ ವಿಶೇಷ ಬಸ್ ಸೇವೆ ಲಭ್ಯವಿದೆ. ಭಕ್ತರಿಗೆ ಅಗತ್ಯ ಮೂಲಸೌಲಭ್ಯವನ್ನು ಕಮಿಟಿ ವತಿಯಂದ ಮಾಡಲಾಗುತ್ತಿದೆ ಎಂದು ಮೋಹನ ನರಗುಂದ ತಿಳಿಸಿದರು.

ಆ.19ರ ಬೆಳಿಗ್ಗೆ 11.30ಕ್ಕೆ ಧಾರ್ಮಿಕ ಸಭೆ, ಮಧ್ಯಾಹ್ನ 4 ಗಂಟೆಗೆ ಕಡುಬಿನ ಕಾಳಗ ವರವಿಯ ಮೌನೇಶ್ವರ ಸ್ವಾಮೀಜಿಗಳಿಂದ, ಸಂಜೆ 6ರಿಂದ ಧಾರ್ಮಿಕ ಸಭೆ-ಶೈಕ್ಷಣಿಕ ವಿಚಾರಗಳು ಹಾಗೂ ಶ್ರೀ ಮೌನೇಶ್ವರ ಲೀಲಾ ವಿಲಾಸ ಪ್ರವಚನ, ರಾತ್ರಿ 8ರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ. ಆ.20ರಂದು ಪಾಲಕಿ ಛಬ್ಬಿಗೆ ಹೋಗಿ ಬರುವುದು, ಬೆಳಿಗ್ಗೆ 9.15ರಿಂದ ಸಾಮೂಹಿಕ ಉಪನಯನ, ಸಂಜೆ 6ರಿಂದ ಧಾರ್ಮಿಕ ಸಭೆ ಹಾಗೂ ಶ್ರೀ ಮೌನೇಶ್ವರ ಲೀಲಾ ವಿಲಾಸ ಪ್ರವಚನ, ಆ.21ರಂದು ಪಾಲಕಿ ಅಲಾವಿ ಗುಡ್ಡಕ್ಕೆ ಹೋಗಿ ಬರುವುದು ಹಾಗೂ ಪುರವಂತರ ಸೇವೆ, ಆ.22ರಂದು ಮಹಾಪ್ರಸಾದ, ಮಧ್ಯಾಹ್ನ 3 ಗಂಟೆಗೆ ಜಾತ್ರಾ ಮಹೋತ್ಸವ ಸಮಾರೋಪ ಸಮಾರಂಭ, ದಾನಿಗಳಿಗೆ ಸನ್ಮಾನ ಹಾಗೂ ಪೂಜಾಫಲ ಲೀಲಾವು ನಡೆಯುವುದು. ಸಾನ್ನಿಧ್ಯವನ್ನು ವರವಿಯ ಮೌನೇಶ್ವರ ಸ್ವಾಮೀಜಿ, ಶಿರಹಟ್ಟಿಯ ಜ.ಫ. ದಿಂಗಾಲೇಶ್ವರ ಸ್ವಾಮೀಜಿ, ಅಣ್ಣಿಗೇರಿಯ ಶಿವಕುಮಾರ ಸ್ವಾಮೀಜಿ, ಅಧ್ಯಕ್ಷೆಯನ್ನು ಮೋಹನ ನರಗುಂದ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಘನ ಉಪಸ್ಥಿತಿ ವಹಿಸುವರು. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಗೌರವ ಉಪಸ್ಥಿತಿ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಶಾಸಕ ಡಾ. ಚಂದ್ರು ಲಮಾಣಿ ಮುಂತಾದವರು ಉಪಸ್ಥಿತರಿಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಚಂದ್ರಕಾಂತ ಸೋನಾರ, ಆರ್.ವಿ. ಕಮ್ಮಾರ, ಬಸಪ್ಪ ಬಡಿಗೇರ, ವಿ.ಎಂ. ಕೊಟ್ರೇಶ್ ಆಚಾರ, ನಿರಂಜನ ಬಡಿಗೇರ, ಮಹೇಶ ಹುಲಬಜಾರ, ಸೋಮನಾಥ ಕುಂದನಗಾರ, ಈರಪ್ಪ ಬಡಿಗೇರ, ಹೂವಪ್ಪ ಸೊರಟೂರ, ಮೌನೇಶ ಬಡಿಗೇರ, ನಾರಾಯಣ ಸಿಂಗಟಾಲೂರ, ಡಿ.ಎಚ್. ಚಿದಾನಂದ, ವೀರಪ್ಪ ಪತ್ತಾರ, ವಾಸಣ್ಣ ನರಗುಂದಕರ ಮುಂತಾದವರು ಉಪಸ್ಥಿತರಿದ್ದರು.



ಸ್ವಾತಂತ್ರ್ಯೋತ್ಸವದ ಹಿನ್ನೆಲೆಯಲ್ಲಿ ಹಮ್ಮಿಕೊಂಡಿರುವ ಹರ್ ಘರ್ ತಿರಂಗಾ ಅಭಿಯಾನದಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಅಭಿಮಾನಿ ಬಳಗದಿಂದ ಗುರುವಾರ ಪಟ್ಟಣದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಸಂಗೊಳ್ಳಿ ರಾಯಣ್ಣನ ಮೂರ್ತಿಗೆ ಮಾಲಾರ್ಪಣೆ ಸಲ್ಲಿಸುವ ಮೂಲಕ ಜನರಿಗೆ ತ್ರಿವರ್ಣ ಧ್ವಜ ನೀಡಿ ಮನೆಗಳ ಮೇಲೆ ಹಾರಿಸುವಂತೆ ಸೂಚಿಸಲಾಯಿತು. ಈ ವೇಳೆ ಮಂಜುನಾಥ ಮಾಗಡಿ, ಹೊನ್ನಪ್ಪ ವಡ್ಡರ, ಸುರೇಶ ಹಟ್ಟಿ, ನಾಗರಾಜ ಚಿಂಚಲಿ, ಮಂಜು ಮುಳಗುಂದ, ಬಸವರಾಜ ಜಾಲಗಾರ, ಭರಮಣ್ಣ ಶರಸೂರಿ, ನಾಗಯ್ಯ ಮಠಪತಿ, ಪವನ ಬಂಕಾಪುರ, ರಮೇಶ ಶಿರಬಡಗಿ, ಸಾಗರ ಕಲಾಲ್, ಮುತ್ತು ಕರ್ಜೆಕಣ್ಣವರ, ಸಿದ್ದಪ್ಪ ನೆನಗನಹಳ್ಳಿ, ನಿಂಗಪ್ಪ ಪ್ಯಾಟಿ ಮುಂತಾದವರಿದ್ದರು.

# ಅಖಂಡ ಭಾರತ ನಿರ್ಮಾಣಕ್ಕೆ ಒಂದಾಗಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಖಂಡ ಭಾರತದ ಸಂಕಲ್ಪಕ್ಕಾಗಿ ಹಿಂದೂಗಳ ಮನಸ್ಸುಗಳು ಒಗ್ಗೂಡಬೇಕು ಎಂದು ಬಿಜೆಪಿ ಶಿರಹಟ್ಟಿ ಮಂಡಲದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಹೇಳಿದರು. ಅವರು ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದ ಹತ್ತಿರ ಆ. 14ರ ಮಧ್ಯರಾತ್ರಿ ಶ್ರೀ ರಾಮಸೇನಾ ತಾಲೂಕು ಘಟಕದಿಂದ ಅಖಂಡ ಭಾರತ ಸಂಕಲ್ಪ ದಿನ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಜಯಂತಿ ಆಚರಣೆಯ ಸಂದರ್ಭದಲ್ಲಿ ಮಾತನಾಡಿದರು.

ಯುವ ಜನತೆ ದುಶ್ಚಟಗಳಿಂದ ದೂರವಿದ್ದು ದೇಶ, ಧರ್ಮದ ಬಗ್ಗೆ ಅಭಿಮಾನ-ಸ್ವಾಭಿಮಾನ ಹೊಂದಿ, ಆ ನಿಟ್ಟಿನಲ್ಲಿ ಜಾಗೃತಿ ಮೂಡಿದಾಗ ಮಾತ್ರ ಅಖಂಡ ಭಾರತ ನಿರ್ಮಾಣ ಸಾಧ್ಯ ಎಂದರು.

ಶ್ರೀರಾಮ ಸೇನಾ ತಾಲೂಕಾ ಅಧ್ಯಕ್ಷ ಈರಣ್ಣ ಪೂಜಾರ ಮಾತನಾಡಿ, ಅಖಂಡ ಭಾರತ ನಿರ್ಮಾಣಕ್ಕೆ ಸಮಸ್ತ ಹಿಂದೂಗಳ ಮನಸ್ಸುಗಳು ಒಂದಾಗಬೇಕು ಎಂದರು.

ಈ ವೇಳೆ ವಿಜಯಕುಮಾರ ಹತ್ತಿಕಾಳ, ನಿಂಗಪ್ಪ ಬನ್ನಿ, ಗಂಗಾಧರ ಮೆಣಸಿನಕಾಯಿ, ಮುತ್ತು ಕರ್ಜಕಣ್ಣವರ, ಮುರುಗೇಂದ್ರ ಸ್ವಾಮಿ ಹಿರೇಮಠ, ಸಂತೋಷ ಜಾವೂರ, ಪ್ರಾಣೇಶ ವ್ಯಾಪಾರಿ, ಅಮಿತ್ ಗುಡಿಗೇರಿ, ಹರೀಶ ಕಟ್ಟಿಮನಿ, ಕಿರಣ ಚಿಲ್ಲೂರಮಠ, ಹನಮಂತ ರಾಮಗೇರಿ, ಚಿನ್ನು ಹಾಳತೋಟದ, ಪ್ರವೀಣ ಬನ್ನಿಕೊಪ್ಪ, ಚಂದ್ರು ಕರ್ಜಕಣ್ಣವರ, ಆದೇಶ ಸವಣೂರ, ಹರೀಶ ಗೋಸಾವಿ, ಮುತ್ತು ಗೋಜನೂರ, ರಮೇಶ ಸಂಶಿ ಸೇರಿ ಕಾರ್ಯಕರ್ತರು ಇದ್ದರು. ಪಟ್ಟಣದ ಪರ್ವತ ಮಲ್ಲಯ್ಯ ದೇವಸ್ಥಾನದಲ್ಲಿಯೂ ಅಮರೇಶ ಗಾಂಜಿ ನೇತೃತ್ವದಲ್ಲಿ ಧ್ವಜಾರೋಹಣ ಮಾಡಲಾಯಿತು.

# ಸಣ್ಣ ಕೈಗಾರಿಕೆಗಳ ಬಗ್ಗೆ ದೇಶದಲ್ಲೇ ನಿರ್ಲಕ್ಷ್ಯವಿದೆ

▶▶ ಮೊದಲನೇ ಪುಟದಿಂದ

ವಾಣಿಜ್ಯೋದ್ಯಮ ಸಂಸ್ಥೆಯವರಿಗೆ ಹೇಗೆ ಉದ್ಯಮ ಮಾಡಬೇಕು ಎಂದು ಹೇಳುವುದು ಅನವಶ್ಯಕ. ಆದರೆ, ಹಣ ಜಗತ್ತನ್ನು ಆಳುವುದಿಲ್ಲ. ವಿಚಾರಗಳು ಜಗತ್ತನ್ನು ಆಳುತ್ತವೆ. ಮನುಷ್ಯನಿಗೆ ದುಡಿಮೆ ಬಹಳ ಮುಖ್ಯ. ಆರೋಗ್ಯವಂತರಾಗಲು ದುಡಿಮೆ ಬಹುಮುಖ್ಯ. ಮನೆಯನ್ನು ವಾಸ್ತು ಪ್ರಕಾರ ಕಟ್ಟಬೇಕು. ಅಷ್ಟೇ ಮನಸ್ಸನ್ನು ಕೂಡ ವಾಸ್ತು ಪ್ರಕಾರ ಕಟ್ಟಬೇಕು. ಅಂದಾಗ ಮಾತ್ರ ಮನಸ್ಸಿಗೆ ನೆಮ್ಮದಿ ಇರುತ್ತದೆ ಎಂದರು. ಮಾಜಿ ಅಧ್ಯಕ್ಷ ಚಂದ್ರು ಬಾಳಿಹಳ್ಳಿಮಠ ಮಾತನಾಡಿ, ನರಸಾಪುರ ಕೈಗಾರಿಕಾ ವಲಯದ ನಿವೇಶನಗಳನ್ನು ಮೂಲ ದರಕ್ಕೆ ಹಂಚಿಕೆ ಮಾಡಬೇಕು ಎಂದು ಆಗ್ರಹಿಸಿದರು. ಹುಬ್ಬಳ್ಳಿ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಎಸ್.ಪಿ. ಸಂಶಿಮಠ ಮಾತನಾಡಿ, ಗದಗ ಅಧ್ಯಕ್ಷ ತಾತನಗೌಡರ ಪಾಟೀಲ ಕಾರ್ಯಪ್ರವೃತ್ತಿ ಎಲ್ಲರೂ ಅಭಿಮಾನ ಪಡುವಂತಿದೆ ಎಂದರು.

ಕೊಪ್ಪಳ ಗವಿಸಿದ್ದೇಶ್ವರ ಶ್ರೀಗಳಿಗೆ ವಾಣಿಜ್ಯೋದ್ಯಮ ಸಂಸ್ಥೆಯಿಂದ ಗೌರವ ಸಮರ್ಪಿಸಲಾಯಿತು. ಎಸ್.ಪಿ. ಸಂಶಿಮಠ, ಸೋಮನಾಥ ಜಾಲಿ, ಆನಂದ ಎಲ್.ಪೋತ್ನಿಸ್, ಶರಣಬಸಪ್ಪ ಗುಡಿಮನಿ, ವಿಜಯಕುಮಾರ ಎಸ್.ಮಾಟಲದಿನ್ನಿ, ಶಿವಯ್ಯ ಆರ್.ನಾಲತ್ವಾಡಮಠ, ಅಶೋಕಗೌಡ ಕೆ.ಪಾಟೀಲ, ರಾಘವೇಂದ್ರ ಎಸ್. ಕಾಲವಾಡ, ಸಂಜಯ ಸಿ.ಬಾಗಮಾರ, ನಂದಾ ಸಿ.ಬಾಳಿಹಳ್ಳಿಮಠ, ದೀಪಾ ಎಸ್.ಗದಗ, ಸುಷ್ಮಾ ಎಸ್.ಜಾಲಿ, ಸುಜಾತ ಎಸ್.ಗುಡಿಮನಿ, ಜ್ಯೋತಿ ಆರ್.ದಾನಪ್ಪಗೌಡ್ರ, ಲಲಿತಾ ಜಿ.ತಡಸದ, ಸುಧಾ ಸಿ.ಹುಣಸಿಕಟ್ಟಿ, ಪೂರ್ಣಿಮಾ ಕೆ.ಆಟದ ಮುಂತಾದವರು ಉಪಸ್ಥಿತರಿದ್ದರು.

### ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ

# ಸಾಧಕ ಗಣ್ಯರಿಗೆ ಜಿಲ್ಲಾಡಳಿತದಿಂದ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಅಂಗವಾಗಿ ಸಾರ್ವಜನಿಕ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು.

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಗುರುತಿಸಿ ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.

ಕಲೆ, ಸಾಹಿತ್ಯ, ರಂಗಭೂಮಿ, ಸಮಾಜ ಸೇವೆ: 2024ನೇ ಸಾಲಿನ ಕರ್ನಾಟಕ ಜಾನಪದ ಅಕಾಡೆಮಿ ವಾರ್ಷಿಕ ಪ್ರಶಸ್ತಿ ಪಡೆದಿದ್ದಕ್ಕಾಗಿ ಶಿರಹಟ್ಟಿ ದೇವಿಹಾಳದ ವೇಷಗಾರ ಡಾ.ಗೋವಿಂದಪ್ಪ ರಾಮಚಂದ್ರಪ್ಪ, 2023ನೇ ಸಾಲಿನ ಕರ್ನಾಟಕ ಜಾನಪದ ಅಕಾಡೆಮಿ ವಾರ್ಷಿಕ ಪ್ರಶಸ್ತಿ ಪಡೆದಿದ್ದಕ್ಕಾಗಿ ಲಕ್ಕುಂಡಿಯ ಬಸವರಾಜ ನೀಲಪ್ಪ ಹಡಗಲಿ, 2023ನೇ ಸಾಲಿನ ಕರ್ನಾಟಕ ಲಲಿತಕಲಾ ಅಕಾಡೆಮಿ ವರ್ಣಶ್ರೀ ಪ್ರಶಸ್ತಿ ಪಡೆದಿದ್ದಕ್ಕಾಗಿ ಮುಳಗುಂದದ ಬಸವರಾಜ ಕುತ್ನಿ, ಸಾಹಿತ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ತಯಬಲಿ ಅ.ಹೊಂಬಳ, 2024ನೇ ಸಾಲಿನ ರಾಣಿ ಚೆನ್ನಮ್ಮ ಪ್ರಶಸ್ತಿ ಪುರಸ್ಕೃತರಾದ ಪೂಜಾ ಮಲ್ಲಪ್ಪ ಬೇವೂರ, ಆಕಾಶವಾಣಿಯ ಎ ಶ್ರೇಣಿಯ ಕಲಾವಿದ ಡಾ. ಎಚ್.ಬಿ. ಹೂಗಾರ, ಪ್ರಾಮಾಣಿಕತೆ ಮೆರೆದಿದ್ದಕ್ಕಾಗಿ ಗದಗನ ಸೈಯದ್ ಹುಸೇನ ಹೊಂಬಳ,



ಪ್ರಾಚ್ಯಾವಶೇಷಗಳನ್ನು ಸಚಿವರಿಗೆ ಹಸ್ತಾಂತರಸಿದ್ದಕ್ಕಾಗಿ ಲಕ್ಕುಂಡಿಯ ಬಸಪ್ಪ ಬಡಿಗೇರ, ಲಕ್ಕುಂಡಿ ಪ್ರಾಚ್ಯಾವಶೇಷಗಳ ಅನ್ವೇಷಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡ ಪೀರಸಾಬ ನದಾಫ್ ಇವರನ್ನು ಗೌರವಿಸಲಾಯಿತು.

**ಆಡಳಿತ, ಆರೋಗ್ಯ, ಕೃಷಿ, ಅರಣ್ಯ, ಕೈಮಗ್ಗ:** ಗದಗ ಮುಖ್ಯ ಪಶುಸಂಗೋಪನಾ ಅಧಿಕಾರಿ ಡಾ. ಪ್ರಕಾಶ ಸಿದ್ಧಪ್ಪ ಜಟ್ಟೆಣ್ಣವರ, ಬೆಟಗೇರಿಯ ಬುದ್ಧಿಮಾಂದ್ಯರ ಶಾಲೆಯ ಮಂಜುನಾಥ ಸುರೇಶ ಮಾಲೂರ, ಯಲ್ಲಪ್ಪ ಕಾಂಬ್ಳೇಕರ್, ಗಜೇಂದ್ರಗಡದ ತೇಜಪ್ಪ ವೆಂಕಟೇಶಪ್ಪ ಚಿನ್ನೂರ, ಡಾ. ಪ್ರದೀಪ ಶಿವಮೂರ್ತೆಪ್ಪ ಉಗಲಾಟ, ಮ್ಯಾಕಲಜರಿಯ ಅಂದಪ್ಪ ಕಾಂತಪ್ಪ ಅಂಗಡಿ, ಸ್ವಚ್ಛತೆ ವಿಭಾಗದಲ್ಲಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದಕ್ಕಾಗಿ ನರಗುಂದ ಪುರಸಭೆ ಮುಖ್ಯಾಧಿಕಾರಿ, ನ್ಯಾಯ ವೈದ್ಯಶಾಸ್ತ್ರ ವಿಭಾಗದ ಪ್ರಾಂಶುಪಾಲರು ಹಾಗೂ ವಿಭಾಗದ ಮುಖ್ಯಸ್ಥ ಡಾ. ರಾಜು ಜಿ.ಎಂ, ಎಲುವು-ಕೀಲು ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕ ಡಾ. ಮಹಾಂತೇಶ ಪಾಟೀಲ, ಶರೀರ ಕ್ರಿಯಾಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸಮತಾ ಪದಕಿ, ಎಂ.ಬಿ.ಬಿ.ಎಸ್ ವಿದ್ಯಾರ್ಥಿ ಬಸಪ್ಪ ಮೌಳಿ, ಜಯಶ್ರೀ ಚೌದ್ರಿ ಇವರನ್ನು ಸನ್ಮಾನಿಸಲಾಯಿತು.

ಶಿಕ್ಷಣ, ಕ್ರೀಡೆ: 2024-25ನೇ ಸಾಲಿನ ದ್ವಿತೀಯ ಪಿ.ಯು.ಸಿ. ಕಲಾ ವಿಭಾಗದ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ವಿಜಯಲಕ್ಷ್ಮೀ ಗೊನಬಾಳ, 2024-25ನೇ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ. ವಾಣಿಜ್ಯ ವಿಭಾಗದ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ನವತಿಕ ಬಿ.ಹಜಾರಿ, 2024-25ನೇ ಸಾಲಿನ ದ್ವಿತೀಯ ಪಿ.ಯು.ಸಿ. ವಿಜ್ಞಾನ ವಿಭಾಗದ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಕಾವ್ಯ ಹಿರೇಗೌಡರ, ಏಪ್ರಿಲ್ 2025ರಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ದಿದ್ದಕ್ಕಾಗಿ ಸುಶೀಲಾ ಶಿವಾನಂದ ಯಲಿಗಾರ, ಅಂತಾರಾಷ್ಟ್ರೀಯ ವಿಜ್ಞಾನ ವಸ್ತುಪ್ರದರ್ಶನದಲ್ಲಿ ಪಾಲ್ಗೊಂಡ ರಕ್ಷಿತಾ ಚುರ್ಚಿಹಾಳ, ಪ್ರಾಚ್ಯ ಪ್ರಜ್ಞೆ ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಉಮೇಶ ಪೂಜಾರಿ, ಎನ್.ಎಸ್.ಎಸ್ ವಿಭಾಗದಲ್ಲಿ 2023-24ನೇ ಸಾಲಿನ ಡಾ. ಡಿ.ಸಿ. ಪಾವಟೆ ಪ್ರಶಸ್ತಿ ಪಡೆದ ಮನೋಜ್ ಎಚ್.ದಲಬಂಜನ, ರಾಷ್ಟ್ರೀಯ ರೋಡ್ ಸ್ಕೇಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನದ ಪದಕ ಪಡೆದ ನಿಖಿಲರಡ್ಡಿ ನಿಂಗರಡ್ಡಿ ತೇರಿನಗಡ್ಡಿ, ಇಂಟರ್ ವಿಶ್ವವಿದ್ಯಾಲಯ ಮಟ್ಟದ ಹಾಕಿ ಕ್ರೀಡಾ ಕೂಟದಲ್ಲಿ ಪಾಲ್ಗೊಂಡ ವೈಷ್ಣವ ಕಲಕಂಬಿ, ರಾಷ್ಟ್ರಮಟ್ಟದ ಕ್ರಾಸ್ ಕಂಟ್ರಿಯಲ್ಲಿ ಪಾಲ್ಗೊಂಡ ದೇವರಾಜ ಕಲ್ಲಪ್ಪ ದೊಡಮನಿ, 21ನೇ ರಾಷ್ಟ್ರ ಮಟ್ಟದ ಎಂಟಿಬಿ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ ಭಾಗವಹಿಸಿದ ಪ್ರಿಯಾಂಕಾ ಲಮಾಣಿ, ಸೌಂದರ್ಯ ಅಂತಾಪೂರ, ರಾಷ್ಟ್ರ ಮಟ್ಟದ ರೋಡ್ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ ಪಾಲ್ಗೊಂಡ ಸಾಗರ ಹೊಳೆಪ್ಪಗೋಳ, ಸೌತ್‌ಝೋನ್ ಜುಡೋ ಚಾಂಪಿಯನ್‌ಶಿಪ್ 2025ರಲ್ಲಿ 30 ಕೆಜಿ ವಿಭಾಗದಲ್ಲಿ ಬೆಳ್ಳಿ ಪದಕ ಪಡೆದ ಸಮರ್ಥ ತಾಳಿ ಇವರನ್ನು ಗೌರವಿಸಲಾಯಿತು.

**ಪತ್ರಿಕೋದ್ಯಮ, ಟಿ.ವಿ ಮಾಧ್ಯಮ**

ಮಾಧ್ಯಮ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ನ್ಯೂಸ್ ಫಸ್ಟ್ ಜಿಲ್ಲಾ ವರದಿಗಾರ ಸುರೇಶ ಕಡ್ಲಿಮಟ್ಟಿ, ಚಕ್ರವರ್ತಿ ದಿನಪತ್ರಿಕೆಯ ಸಂಪಾದಕ ನಾಗೋಸಾ ಭಾಂಡಗೆ, ವಿಜಯ ಕರ್ನಾಟಕದ ವರದಿಗಾರ ರುದ್ರಗೌಡ ಪಾಟೀಲ, ಪವರ್ ಟಿವಿಯ ಜಿಲ್ಲಾ ವರದಿಗಾರ ಆನಂದಯ್ಯ ವಿರಕ್ತಮಠ, ಕನ್ನಡಪ್ರಭ ರೋಣ ತಾಲೂಕು ವರದಿಗಾರ ಪಿ.ಎಸ್. ಪಾಟೀಲ, ವಿಜಯವಾಣಿ ನರೇಗಲ್ ಹೋಬಳಿ ವರದಿಗಾರ ಪ್ರಭುಸ್ವಾಮಿ ಅರವಟಿಮಠ, ಸಂಯುಕ್ತ ಕರ್ನಾಟಕದ ಲಕ್ಷ್ಮೇಶ್ವರ ವರದಿಗಾರ ದಿಗಂಬರ ಪೂಜಾರ, ವಿಜಯ ಕರ್ನಾಟಕದ ಮುಂಡರಗಿ ವರದಿಗಾರ ಸಿ.ಕೆ. ಗಣಪ್ಪನವರ, ಕಿತ್ತೂರು ಕರ್ನಾಟಕದ ನರಗುಂದ ವರದಿಗಾರ ಪ್ರಭು ಗುಡಾರದ, ವಿಜಯವಾಣಿ ಮುಳಗುಂದ ಹೋಬಳಿ ವರದಿಗಾರ ಎಮ್.ಎಮ್. ಜಮಾಲಸಾಬನವರ ಇವರನ್ನು ಗೌರವಿಸಲಾಯಿತು.

### ಶ್ರಾವಣ ಸಂಜೆ ಕಾರ್ಯಕ್ರಮದಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ

# ಸಾರಸ್ವತ ಲೋಕಕ್ಕೆ ಗದುಗಿನ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ನಾಡಿನ ಸಾಹಿತ್ಯ, ಸಂಗೀತ, ಕಲೆ, ಸಹಕಾರ, ಕೃಷಿ, ಶಿಕ್ಷಣ, ಮುದ್ರಣ, ರಂಗಭೂಮಿ ಹೀಗೆ ಎಲ್ಲ ಕ್ಷೇತ್ರಗಳಲ್ಲಿ ಗದಗ ಜಿಲ್ಲೆಯ ಕೊಡುಗೆ ಅಮೂಲ್ಯವಾಗಿದೆ ಎಂದು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಭಿಪ್ರಾಯಪಟ್ಟರು.




ಅವರು ಬುಧವಾರ ಪಟ್ಟಣದ ಶ್ರೀ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶ್ರಾವಣ ಸಂಜೆ ಕಾರ್ಯಕ್ರಮದಲ್ಲಿ ಮಾತನಾಡಿ, ಕುಮಾರವ್ಯಾಸನ ಗದುಗಿನ ಭಾರತ, ಚಾಮರಸನ ಪ್ರಭುಲಿಂಗಲೀಲೆ, ಪಂಚಾಕ್ಷರಿ ಮತ್ತು ಪುಟ್ಟರಾಜ ಕವಿ ಗವಾಯಿಗಳು, ಸಿದ್ದನಗೌಡ ಪಾಟೀಲ, ಕೆ.ಹೆಚ್. ಪಾಟೀಲ, ಚಟ್ಟಿ ಹಾಗೂ ಟಿ.ಪಿ. ಅಕ್ಕಿ, ಸಿ.ಎನ್. ಪಾಟೀಲ, ಗರುಡ ಸದಾಶಿವರಾಯರು, ವೆಂಕೋಬರಾಯರು, ನರಗುಂದದ ಬಾಬಾ ಸಾಹೇಬರು, ಮುಂಡರಗಿಯ ಭೀಮರಾಯರು, ಮೈಲಾರ ಮಹಾದೇವ, ಏಕೀಕರಣ ಹೋರಾಟಗಾರರದ ಹುಯಿಲಗೋಳ ನಾರಾಯಣರಾಯರು, ಅಂದಾನೆಪ್ಪಾ ದೊಡ್ಡಮೇಟಿ, ಸಂತರು, ಶರಣರು, ಗದುಗಿನ ವೀರನಾರಾಯಣ, ಲಕ್ಕುಂಡಿಯ ವಿಶ್ವನಾಥ ದೇವಾಲಯ ಲಕ್ಷ್ಮೇಶ್ವರದ ಸೋಮೇಶ್ವರ ದೇವಾಲಯ, ಮಠ-ಮಾನ್ಯಗಳು, ಪುಸ್ತಕ-ಪತ್ರಿಕೆ, ವಾಣಿಜ್ಯೋದ್ಯಮ, ಕೈಗಾರಿಕೆ, ವನ್ಯಜೀವಿ ಸಂಪತ್ತು ಹೀಗೆ ಗದಗ ಜಿಲ್ಲೆಯ ಹಿರಿಮೆ-ಗರಿಮೆ ವಿವರಿಸಿದ ಹಿರಿಯ ಸಾಹಿತಿ ದಿ. ಪ್ರೊ ಸಿ.ವಿ. ಕೆರಿಮನಿ ಸಂಪಾದಿತ 'ಗದಗ ಜಿಲ್ಲೆ ಒಂದು ಅಧ್ಯಯನ' ಕೃತಿಯ ಕುರಿತು ವಿಮರ್ಶಾತ್ಮಕ ಉಪನ್ಯಾಸ ನೀಡಿದರು.

ನಿ. ಪ್ರಾಧ್ಯಾಪಕ ಆರ್.ಎನ್. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲಾ ಕಸಾಪ ಕೋಶಾಧ್ಯಕ್ಷ ಡಿ.ಎಸ್. ಬಾಪುರೆ, ಹಿರಿಯ ಸಾಹಿತಿ ಲಲಿತಾ ಕೆರಿಮನಿ, ತಾಲೂಕಾ ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ಕದಳಿ ವೇದಿಕೆಯ ಅಧ್ಯಕ್ಷೆ ನಿರ್ಮಲಾ ಅರಳಿ, ಎಂ.ಎಸ್. ಚಾಕಲಬ್ಬಿ, ನಾಗರಾಜ ಕಳಸಾಪುರ, ರವಿರಾಜ್ ಶಿಗ್ಲಿ, ಪ್ರತಿಮಾ ಮಹಾಜನಶೆಟ್ಟರ, ಕುಸುಮಾ ಮಲ್ಲಾಡದ, ಸಿ.ಜಿ. ಹಿರೇಮಠ, ಕೆ.ಎಸ್. ಕೊಡ್ಲಿವಾಡ, ಎಸ್.ಎಫ್. ಆದಿ, ಜಿ.ಎಸ್. ರಾಮಶೆಟ್ಟರ, ಎಚ್.ಜಿ. ದುರಗಣ್ಣವರ, ಬಿ.ಎಸ್. ಸಂಗಪ್ಪಶೆಟ್ಟರ, ರತ್ನಾ ಕರ್ಕಿ, ಸೋಮಶೇಖರ ಕೆರಿಮನಿ ಇದ್ದರು.

ಶಿಕ್ಷಕಿ ಡಿ.ಎಫ್. ಪಾಟೀಲ, ರೇಖಾ ವಡಕಣ್ಣವರ, ನಾಗರತ್ನ ಬುರುಡಿ ನಿರೂಪಿಸಿದರು

# ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಧ್ವಜಾರೋಹಣ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಕಾರ್ಯಾಲಯದಲ್ಲಿ 79ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಧ್ವಜಾರೋಹಣವನ್ನು ಗದಗ ಜಿಲ್ಲಾಧ್ಯಾಕ್ಷ ತೋಟಪ್ಪ (ರಾಜು) ಕುರುಡಗಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಾರತದ ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ಬಲಿದಾನಗೈದಿದ್ದಾರೆ. ಅಂತಹ ಮಹನೀಯರಿಂದಲೇ ನಮಗೆಲ್ಲ ಸ್ವಾತಂತ್ರ್ಯ ಸಿಕ್ಕಿದೆ ಎಂದರು.



ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ಮಾತನಾಡಿ, ವಿಶ್ವದಲ್ಲಿ 4ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿರುವ ಭಾರತ ಇಂದು 79ನೇ ಸ್ವಾತಂತ್ರ್ಯೋತ್ಸವ ಸಂಭ್ರಮಾಚರಣೆಯಲ್ಲಿದೆ ಎಂದರು.

ಕಾರ್ಯಕ್ರಮದಲ್ಲಿ ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರೀಗೌಡ್ರ, ವಕ್ತಾರರಾದ ಎಂ.ಎಂ. ಹಿರೇಮಠ, ಪ್ರಮುಖರಾದ ಸಂಗಮೇಶ ದುಂದೂರ, ಜಗನ್ನಾಥಸಾ ಭಾಂಡಗೆ, ಶ್ರೀಪತಿ ಉಡುಪಿ, ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಅಶೋಕ ಸಂಕಣ್ಣವರ, ಅನಿಲ ಅಬ್ಬಿಗೇರಿ, ಕೆ.ಪಿ. ಕೋಟಿಗೌಡ್ರ, ಶಶಿಧರ ದಿಂಡೂರ, ರಮೇಶ ಸಜ್ಜಗಾರ, ಶಾರದಾ ಸಜ್ಜನ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಅಮರನಾಥ ಬೆಟಗೇರಿ, ಶಂಕರ ಕರಿಬಿಷ್ಠಿ, ಮಂಜುನಾಥ ಶಾಂತಗೇರಿ, ಪಾರ್ವತಿ ಪಟ್ಟಣಶೆಟ್ಟಿ, ಪುಷ್ಪಾ ಪೂಜಾರ, ಅಕ್ಕಮ್ಮ ವಸ್ತ್ರದ, ಸುಮಂಗಲಾ ಕೊನೆವಾಲ, ರವಿ ಮಾನ್ವಿ, ರಾಜು ಹೊಂಗಲ, ಸುಜಯ ಗಲಗಲಿ, ವಾಸು ಹುಯಿಲಗೋಳ, ಮಂಜುನಾಥ, ವಿನೋದ ಹಂಸನೂರ ಮುಂತಾದವರಿದ್ದರು.

# ಗುರುವಿನ ಸ್ಮರಣೆಯಿಂದ ಜೀವನ ಪಾವನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಬ್ಬ ಮನುಷ್ಯನ ಬದುಕಿನಲ್ಲಿ ಅಜ್ಞಾನದ ಅಂಧಕಾರ ತೊಲಗಿಸಿ ಸುಜ್ಞಾನದ ಬೆಳಕು ಮೂಡಿಸುವ ಗುರುವಿನ ಸ್ಮರಣೆಯಿಂದ ಜೀವನ ಪಾವನ, ಸಾರ್ಥಕತೆ ಹೊಂದುತ್ತದೆಂದು ಮೈಸೂರ/ಬನ್ನಿಕೊಪ್ಪದ ಜಪದ ಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯರು ಹೇಳಿದರು.



ಅವರು ಗುರುವಾರ ಪಟ್ಟಣದ ಕರೇವಾಡಿಮಠದ ಲಿಂ.ಶ್ರೀ ಶಂಕರ ಶಿವಾಚಾರ್ಯರ 77ನೇ ಪುಣ್ಯಾರಾಧನೆ ಸ್ಮರಣೋತ್ಸವದ ಧರ್ಮಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮಠ ಮಾನ್ಯಗಳು ನಾಡಿನ ಭಕ್ತ ಕುಲಕೋಟಿಯ ಶ್ರೇಯಸ್ಸಿಗಾಗಿ ಮತ್ತು ತ್ರಿವಿಧ ದಾಸೋಹಕ್ಕಾಗಿ ಅವಿರತ ಸೇವೆ ಮಾಡಿವೆ. ಬಾಲ್ಯದಿಂದಲೇ ಗುರುವಿನ ಕರುಣೆ, ಸಂಸ್ಕಾರ, ಸನ್ಮಾರ್ಗ ಅವಶ್ಯವಾಗಿದ್ದು, ಸುಂದರ ಬದುಕಿಗೆ ಬೆಳಕಾದ ಗುರುವಿನ ಸ್ಮರಣೆ ಮರೆಯಬಾರದು ಎಂದರು.

ಪುಣ್ಯ ಸ್ಮರಣೋತ್ಸವದ ನಿಮಿತ್ತ ಮಠದಲ್ಲಿ ಬೆಳಿಗ್ಗೆಯೇ ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯರು ಮತ್ತು ಕರೇವಾಡಿಮಠದ ಶ್ರೀ ಮಳೇ ಮಲ್ಲಿಕಾರ್ಜುನ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಪೂಜಾ ಕೈಂಕರ್ಯಗಳು ನಡೆದವು. ರುದ್ರ ಬಳಗದವರಿಂದ ರುದ್ರಪಠಣ ಮತ್ತು ಮುತ್ತೈದರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಿತು.

ಸಂಜೆ ಹಾಸ್ಯ ಸಾಹಿತಿ ಪಿ. ಜಗನ್ನಾಥ ಅವರ ಹಾಸ್ಯ ಹಾಗೂ ಶ್ರೀ ಶಾರದಾ ಸ್ವರಾಂಜಲಿ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳಿಂದ ಸಂಗೀತ ಕಾರ್ಯಕ್ರಮ, ಹಳ್ಳದಕೇರಿ ಓಣಿಯ ಶಕ್ತಿ ಮತ್ತು ಮಾರುತಿ ಭಜನಾ ಸಂಘದವರಿಂದ ಭಜನಾ ಸೇವೆ ನೆರವೇರಿತು. ಸಂಗಯ್ಯ ಸಾಲಾವಳಿಮಠ, ಚನ್ನಪ್ಪ ಕರೆಯತ್ತಿನ, ಚಂದ್ರಪ್ಪ ಅಮರಶೆಟ್ಟಿ, ಶಿವನಗೌಡ್ರ ಅಡರಕಟ್ಟಿ, ಮಂಜು ಕೋಟಗಿ, ಯಲ್ಲಪ್ಪ ಮುಳುಗುಂದ, ರಮೇಶ ಕಮಡೊಳ್ಳಿ, ದ್ಯಾಮಣ್ಣ ಕಮತದ, ಸೋಮಣ್ಣ ಕರೆಯತ್ತಿನ, ಶಿವಲಿಂಗಪ್ಪ ನಾವ್ಹಿ, ಮಲ್ಲೇಶಪ್ಪ ಕಮಡೊಳ್ಳಿ, ಕೊಟ್ರೇಶ್ ಬಳ್ಳಾರಿ, ವೀರಭದ್ರಯ್ಯ ಹಿರೇಮಠ, ಆನಂದಸ್ವಾಮಿ, ಶಿವರಾಜ ಕರೇವಾಡಿಮಠ ಇದ್ದರು.

### ಅಂತಾರಾಷ್ಟ್ರೀಯ ಯುವದಿನ, ತೀವ್ರತರದ ಹೆಚ್.ಐ.ವಿ ಏಡ್ಸ್ ಅರಿವಿನ ಮಾಸಾಚರಣೆ

# ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲೆಯ ರೆಡ್ ರಿಬ್ಬನ್ ಕಾಲೇಜುಗಳು ಮತ್ತು ಜಿಲ್ಲೆಯ ಎಲ್ಲ ಶಿಕ್ಷಣ ಮಹಾವಿದ್ಯಾಲಯಗಳು, ಎಂ.ಬಿ. ಹುಯಿಲಗೋಳ ಶಿಕ್ಷಣ ಮಾಹಾವಿದಾಲಯ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಅಂತಾರಾಷ್ಟ್ರೀಯ ಯುವ ದಿನ ಹಾಗೂ ತೀವ್ರತರ ಹೆಚ್.ಐ.ವಿ. ಅರಿವಿನ ಮಾಸಾಚರಣೆ ಉದ್ಘಾಟನಾ ಕಾರ್ಯಕ್ರಮ ಜರುಗಿತು.




ಸಮಾರಂಭ ಉದ್ಘಾಟಿಸಿದ ಡ್ಯಾಪ್ಕೂ ಅಧಿಕಾರಿ ಡಾ. ಅರುಂಧತಿ ಕೆ ಮಾತನಾಡಿ, ಯೌವನವನ್ನು ಸದುಪಯೋಗಪಡಿಸಿಕೊಳ್ಳಲು ಮಾನಸಿಕ, ದೈಹಿಕ, ಸಾಮಾಜಿಕ ಆರೋಗ್ಯದ ಹಿತಕ್ಕಾಗಿ ಸಮಾಜದಲ್ಲಿ ಒಳ್ಳೆಯ ಸಂಪನ್ಮೂಲ ವ್ಯಕ್ತಿಗಳಾಗಿ ಬೆಳೆಯಬೇಕು. ಈ ವರ್ಷದ ಘೋಷಣೆ 'ಸುಸ್ಥಿರ ಅಭಿವೃದ್ಧಿಗಾಗಿ ಸ್ಥಳೀಯ ಯುವ ಜನರ ಪಾತ್ರ ಹಾಗೂ ಗುರಿಗಳು' ಅನುಸಾರ ಇಂದಿನ ಯುವಕರು ಸದೃಢ ಆರೋಗ್ಯವನ್ನು ಹೊಂದಿ, ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಬೇಕೆಂದು ತಿಳಿಸಿದರು.

ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಬಿ.ಬಿ. ಲಾಳಗಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಅಂತಾರಾಷ್ಟ್ರೀಯ ಯುವ ದಿನಾಚರಣೆಯ ಮಹತ್ವವನ್ನು ತಿಳಿಸುತ್ತಾ, ಇಂದಿನ ಯುಗದಲ್ಲಿ ಯುವಕರು ಆರೋಗ್ಯದ ಅರಿವವನ್ನು ಮೂಡಿಸಿ, ಶಿಕ್ಷಣವನ್ನು ಪರಿವರ್ತಿಸುವುದು. ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸಲು ಶಿಕ್ಷಣವನ್ನು ಹೆಚ್ಚು ಪ್ರಸ್ತುತ, ನ್ಯಾಯ ಸಮ್ಮತವಾಗಿಸುವ ನಿಟ್ಟಿನಲ್ಲಿ ಯುವಜನರ ಪಾತ್ರ ಮುಖ್ಯವಾಗಿವೆ. ರೋಗಿಯ ಜೀವ ಉಳಿಸಲು ವೈದ್ಯರಾಗಬೇಕಿಲ್ಲ, ರಕ್ತದಾನ ಮಾಡಿದರೆ ಸಾಕು ಎಂದು ತಿಳಿಸಿದರು. ಕಾಲೇಜಿನ ಪ್ರಾಚಾರ್ಯರಾದ ಗಂಗೂಬಾಯಿ ಪವಾರ ಅಧ್ಯಕ್ಷೀಯ ನುಡಿಗಳನ್ನಾಡಿ, ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಯೌವನವನ್ನು ಜೋಪಾನ ಮಾಡಿಕೊಳ್ಳಬೇಕು. ಇಲಾಖೆಯ ವಿವಿಧ ಸಾಮಾಜಿಕ ಕಾರ್ಯಗಳಲ್ಲಿ ಪಾಲ್ಗೊಂಡು ಸಾಮಾಜಿಕ ಸೇವೆಗೆ ಮುಂದಾಗಬೇಕೆಂದು ಹೇಳಿದರು.

ಇಂದಿನ ಯುವ ಜನಾಂಗದಲ್ಲಿ ಸಾಮಾಜಿಕ ಮೌಲ್ಯಗಳು ಕಡಿಮೆಯಾಗಿದ್ದು, ಗುರು-ಹಿರಿಯರು, ತಂದೆ-ತಾಯಿ ಎನ್ನುವ ಗೌರವವಿಲ್ಲದೆ ಆಧುನಿಕ ಮಾಧ್ಯಮದ ಪ್ರಭಾವಕ್ಕೆ ಮಾರು ಹೋಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ನಮ್ಮ ದೇಶದಲ್ಲಿ ಶೇ.40ರಷ್ಟು ಇರುವ ಯುವಜನರು ತಮ್ಮ ಜವಾಬ್ದಾರಿಯನ್ನು ಅರಿತು ದೇಶದ ಒಳಿತಿಗೆ ಪೂರಕವಾದ ತೀರ್ಮಾಣವನ್ನು ಕೈಗೊಂಡು ಸದೃಢವಾದ ದೇಶ ಕಟ್ಟುವಲ್ಲಿ ಕೈ ಜೋಡಿಸಬೇಕೆಂದು ಡಾ. ಅರುಂಧತಿ ಕೆ ತಿಳಿಸಿದರು.

ಸಮಾರಂಭದಲ್ಲಿ ಪ್ರೊ. ವಿ.ಪಿ. ಪಾಟೀಲ, ಪ್ರೊ. ಎನ್.ಜಿ. ಚನ್ನಪ್ಪಗೌಡರ, ಪ್ರೊ. ವಿ.ಬಿ. ತಾಳಿ, ಪ್ರೊ. ಎಸ್.ವಾಯ್. ಕಠಾರೆ, ಪ್ರೊ. ಎಲ್.ಎಸ್. ಹೊಸಳ್ಳಿ, ಸಂತೋಷ ಬಡಿಗೇರ, ಕಾಲೇಜಿನ ಸಿಬ್ಬಂದಿಗಳು ಹಾಗೂ ಆರೋಗ್ಯ ಸಿಬ್ಬಂದಿ ವರ್ಗದವರು ಹಾಜರಿದ್ದರು. ಹಜರತ್ಬೀ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಸಹನಾ ಜಂಬಗಿ ಸ್ವಾಗತಿಸಿದರು. ಆಫ್ರೀನ್ ಹಾಗೂ ರವಿಚಂದ್ರ ಕಾರ್ಯಕ್ರಮವನ್ನು ನಿರೂಪಿಸಿದರು. ಕುಮಾರ ಶ್ರೀಕಾಂತ ಕರಡಿ ವಂದಿಸಿದರು.



ಕೃತಪುರ ಸೇವಾ ಸಮಿತಿ ವತಿಯಿಂದ ಗುರುವಾರ ರಾತ್ರಿ 79ನೇ ಸ್ವಾತಂತ್ರ್ಯೋತ್ಸವವನ್ನು ಮಧ್ಯರಾತ್ರಿ 12ಗಂಟೆಗೆ ಧ್ವಜಾರೋಹಣವನ್ನು ಭದ್ರತಾ ಸಿಬ್ಬಂದಿ ಬಡ್ನಿ ಅವರಿಂದ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಕೃತಪುರ ಸೇವಾ ಸಮಿತಿಯ ಅಧ್ಯಕ್ಷ ಚನ್ನಬಸಪ್ಪ ಡಿಗ್ಗಾವಿ, ಬಡಾವಣೆಯ ಠಾಣೆಯ ಎಎಸ್ ಐ ಹುಡೇದ ಹಾಗೂ ಕೃತಪುರ ಸೇವಾ ಸಮಿತಿಯ ಸರ್ವ ಸದಸ್ಯರು ಇದ್ದರು.

## ಪ್ರಚಾರ ಗಿಟ್ಟಿಸಿಕೊಳ್ಳೋದು, ತಪ್ಪು ಮುಚ್ಚಿ ಹಾಕುವುದು ಬಿಜೆಪಿ ಕೆಲಸ: ಸಂತೋಷ್ ಲಾಡ್!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರಚಾರ ಗಿಟ್ಟಿಸಿಕೊಳ್ಳೋದು, ತಪ್ಪು ಮುಚ್ಚಿ ಹಾಕುವುದು ಬಿಜೆಪಿ ಕೆಲಸ ಎಂದು ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ. ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, 2004 ರಿಂದ 2025 ರವರೆಗೆ ಎಷ್ಟು ಟೆಕ್ನಾಲಾಜಿ ಚೇಂಜ್ ಆಗಿದೆ. ಆದರೆ ಇವತ್ತಿಗೂ ಬಿಜೆಪಿಯವರಿಗೆ ಡಿಜಿಟಲ್ ವೋಟರ್ ಲಿಸ್ಟ್ ಮಾಡಲು ಆಗುತ್ತಿಲ್ಲ. ಏನೋ ಡಿಜಿಟಲ್ ಇಂಡಿಯಾ, ಖೇಲೋ ಇಂಡಿಯಾ, ದಿನ ಬೆಳಗಾದರೆ ಬಿಜೆಪಿಯವರು ಇದನ್ನೇ ಹೇಳುತ್ತಾರೆ ಎಂದು ಕಿಡಿಕಾರಿದರು. ಮತಗಳ್ಳತನದ ಪ್ರಕರಣ ಸುಪ್ರೀಂಕೋರ್ಟ್‌ಗೆ ಹೋಗಿದೆ. 65 ಲಕ್ಷ ಮತಗಳು ಬಿಹಾರದಲ್ಲಿ ಎಸ್‌ಐಆರ್ ಮುಖಾಂತರ ಡಿಲಿಟ್ ಆಗಿವೆ. ಬಿಹಾರದಲ್ಲಿ 8 ಕೋಟಿ ಜನಸಂಖ್ಯೆ ಇದೆ. ಅಲ್ಲಿ 65 ಲಕ್ಷ ಮತ ಡಿಲೀಟ್ ಮಾಡಿದ್ದಾರೆ. ನಾವು ಚುನಾವಣಾ ಆಯೋಗದ ಬಗ್ಗೆ ಮಾತನಾಡುತ್ತಿದ್ದೇವೆ. ರಾಹುಲ್ ಗಾಂಧಿ ಪ್ರತಿಯೊಬ್ಬ ಭಾರತೀಯರ ಹಕ್ಕಿಗಾಗಿ ಮಾತನಾಡುತ್ತಿದ್ದಾರೆ. ಅದರಲ್ಲಿ ಬಿಜೆಪಿ ಅವರು ಬಂದು ಮಾತನಾಡೋದು ಏನಿದೆ ಎಂದು ಪ್ರಶ್ನಿಸಿದ್ದಾರೆ.

# ಪ್ರಜೆಗಳು ನೆಮ್ಮದಿಯಿಂದ ಬದುಕಬೇಕು

▶▶ಮೊದಲನೇ ಪುಟದಿಂದ

ಈ ಕಾರ್ಯಕ್ರಮ ಮಾಡಲು ಜಿಲ್ಲಾಡಳಿತದಿಂದ ಸಾಕಷ್ಟು ಸೂಚನೆ, ಸಲಹೆ, ಮಾರ್ಗದರ್ಶನ ಪಡೆದಿದ್ದೇವೆ. ಪ್ರಜೆಗಳು ಈ ವ್ಯವಸ್ಥೆ ಒಪ್ಪಿಕೊಳ್ಳುತ್ತಾರೆ. ಆದರೆ, ಆಡಳಿತದಲ್ಲಿ ಇರುವವರು ಇದನ್ನು ಒಪ್ಪುವುದು ಕಠಿಣ. ಆದರೂ, ನಮಗೆ ಎಷ್ಟೇ ತೊಂದರೆ ಆದರೂ ಜನರಿಗಾಗಿ ಈ ವ್ಯವಸ್ಥೆ ಜಾರಿಗೊಳಿಸುತ್ತಿದ್ದೇವೆ. ಯಾವುದೇ ಭೀತಿಯಿಲ್ಲದೇ ಡಿಸಿ, ಎಸ್ಪಿ, ಸಿಇಓ ಸೇರಿದಂತೆ ಎಲ್ಲ ಇಲಾಖೆಯ ಅಧಿಕಾರಿಗಳಿಗೆ ಸಾರ್ವಜನಿಕರು ದೂರು ಸಲ್ಲಿಸಬಹುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಜಿಲ್ಲಾ ವಾರ್ತಾಧಿಕಾರಿ ವಸಂತ ಮಾಡ್ಲೂರ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಅಸೂಟಿ, ಸಿದ್ಧಲಿಂಗೇಶ ಪಾಟೀಲ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಬಸವರಾಜ ಬಳ್ಳಾರಿ, ನಾಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka